ಸಂಪುಟ : 11 ಸಂಚಿಕೆ: 80 ಪುಟ : 4+2 ಬೆಲೆ: 3.00 ಮಂಗಳವಾರ ಎಪ್ರಿಲ್ 28 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 80 Pages : 4+2 Price : 3.00 Tuesday April 28 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

**ಏಕಬೆಳೆ ಬದಲು ಅಂತರ ಹಾಗೂ ಮಿಶ್ರ ಬೆಳೆ ಪದ್ಧತಿ ಅಳವಡಿಸಿಕೊಳ್ಳಲು ರೈತರಿಗೆ ಸಲಹೆ**

## ಮುಂಗಾರು ಹಂಗಾಮಿಗೆ ಬೆಳೆ ಪದ್ಧತಿ ಮಾರ್ಗದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಸಾಲಿನ ಮುಂಗಾರು ಹಂಗಾಮಿಗೆ ರೈತರು ಏಕಬೆಳೆ ಪದ್ಧತಿಯನ್ನು ತಪ್ಪಿಸಿ ಅಂತರ ಬೆಳೆ ಹಾಗೂ ಮಿಶ್ರ ಬೆಳೆ ಪದ್ಧತಿಗಳನ್ನು ಅನುಸರಿಸಬೇಕು ಎಂದು ಕೃಷಿ ಇಲಾಖೆ ಸಲಹೆ ನೀಡಿದೆ.

ಹೆಸರು, ಮುಸುಕಿನ ಜೋಳ, ಜೋಳ, ಶೇಂಗಾ ಮುಂತಾದ ಬೆಳೆಗಳನ್ನು ಏಕಬೆಳೆಯಾಗಿ ಬೆಳೆಯುವುದರಿಂದ ಮಣ್ಣಿನ ಫಲವತ್ತತೆ ಕುಗ್ಗುವುದರ ಜೊತೆಗೆ ಕೀಟ ಮತ್ತು ರೋಗ ಬಾಧೆ ಹೆಚ್ಚಾಗುವ ಸಾಧ್ಯತೆ ಇದೆ. ಆದ್ದರಿಂದ ಏಕದಳ ಧಾನ್ಯಗಳ ಜೊತೆಗೆ ದ್ವಿದಳ ಧಾನ್ಯಗಳು ಹಾಗೂ ಎಣ್ಣೆಕಾಳು ಬೆಳೆಗಳೊಂದಿಗೆ ಮಿಶ್ರವಾಗಿ ಬೆಳೆಯುವುದರಿಂದ ಮಣ್ಣಿನ ಫಲವತ್ತತೆ ಉಳಿಯುತ್ತದೆ.

ದ್ವಿದಳ ಧಾನ್ಯಗಳು ವಾತಾವರಣದಲ್ಲಿರುವ ಸಾರಜನಕವನ್ನು ಹೀರಿಕೊಂಡು ಭೂಮಿಯಲ್ಲಿ ಸ್ಥಿರಗೊಳಿಸುವುದರಿಂದ ಮಣ್ಣಿನ ಗುಣಮಟ್ಟ ಹೆಚ್ಚಾಗುತ್ತದೆ. ಜೊತೆಗೆ ಮಿಶ್ರ ಬೆಳೆ ಪದ್ಧತಿಯಿಂದ ಹೆಚ್ಚುವರಿ ಇಳುವರಿ ದೊರೆಯುವುದರಿಂದ ರೈತರ ಆದಾಯವೂ ಹೆಚ್ಚಾಗುತ್ತದೆ.

ಮುಂಗಾರು ಹಂಗಾಮಿಗೆ ಗೋವಿನ ಜೋಳ + ತೊಗರಿ (4:2), ತೊಗರಿ + ಹೆಸರು/ಉದ್ದು (4:1), ಹತ್ತಿ + ಈರುಳ್ಳಿ (1:5), ಹತ್ತಿ + ಶೇಂಗಾ (1:3), ಔಡಲ + ತೊಗರಿ (1:1), ಔಡಲ + ಸಜ್ಜೆ (1:3) ಮುಂತಾದ ಅಂತರ ಬೆಳೆ ಪದ್ಧತಿಗಳು ಸೂಕ್ತವೆಂದು ತಿಳಿಸಲಾಗಿದೆ.

ಕಪ್ಪು ಮಣ್ಣಿನ ವಿವಿಧ ಆಳಗಳಿಗೆ ಅನುಗುಣವಾಗಿ ತೊಗರಿ, ನವಣೆ, ಹೆಸರು ಮುಂತಾದ ಬೆಳೆಗಳನ್ನು ಸರಿಯಾದ ಸಾಲಿನ ಅನುಪಾತದಲ್ಲಿ ಬೆಳೆಸುವ ಮೂಲಕ ಉತ್ತಮ ಇಳುವರಿ ಪಡೆಯಬಹುದು ಎಂದು ಸೂಚಿಸಲಾಗಿದೆ.

ಬೆಳೆ ಪರಿವರ್ತನೆ, ಅಂತರ ಬೆಳೆ ಹಾಗೂ ಮಿಶ್ರ ಬೆಳೆ ಪದ್ಧತಿಗಳನ್ನು ಅನುಸರಿಸುವುದರಿಂದ ಕೀಟ–ರೋಗ ಬಾಧೆ ಕಡಿಮೆಯಾಗುತ್ತದೆ. ಜೊತೆಗೆ ಮಣ್ಣಿನ ಫಲವತ್ತತೆ ಕಾಪಾಡಿಕೊಂಡು ಹೆಚ್ಚಿನ ಉತ್ಪಾದನೆ ಪಡೆಯಲು ಸಾಧ್ಯವಾಗುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿ.ವಿ.ಎ ಕೋರ್ಸ್‌ಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಚಾಮರಾಜೇಂದ್ರ ಸರ್ಕಾರಿ ದೃಶ್ಯ ಕಲಾ ಕಾಲೇಜು, ಸಿದ್ಧಾರ್ಥನಗರ, ಮೈಸೂರು ಇಲ್ಲಿ 2026–27ನೇ ಸಾಲಿನ ಬ್ಯಾಚುಲರ್ ಆಫ್ ವಿಜ್ಯುವಲ್ ಆರ್ಟ್ಸ್ (ಬಿ.ವಿ.ಎ) ಪದವಿ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಮೇ 30ರೊಳಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು UUCMS Karnataka portal (https://uucms.karnataka.gov.in) ಅಥವಾ ಕಾಲೇಜಿನ ಅಧಿಕೃತ ಜಾಲತಾಣ https://cavamysore.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆ ಹಾಗೂ ಸಂದರ್ಶನದ ದಿನಾಂಕವನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ಸಹಾಯವಾಣಿ 0821–2438931 ಸಂಪರ್ಕಿಸಬಹುದಾಗಿದೆ.

**ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಸಾಧನೆಗೆ ಗೌರವ । ಶಿಕ್ಷಕರ ಶ್ರಮಕ್ಕೂ ಸಚಿವ ಎಚ್.ಕೆ. ಪಾಟೀಲ ಅಭಿನಂದನೆ**

# ಸಂಕಲ್ಪ ಇದ್ದರೆ ಸಾಧನೆ ನಿಶ್ಚಿತ!

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಜನೆಗೆ ಬಡತನ ಎಂದಿಗೂ ಅಡ್ಡಿಯಾಗುವುದಿಲ್ಲ ಎಂಬುದಕ್ಕೆ ಗದಗ ಜಿಲ್ಲೆಯ ವಿದ್ಯಾರ್ಥಿಗಳ ಸಾಧನೆಯೇ ಸ್ಪಷ್ಟ ಉದಾಹರಣೆ ಎಂದು ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಹೇಳಿದರು.



ನಗರದಲ್ಲಿನ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಭಾನುವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಆಯೋಜಿಸಿದ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಬಡತನವನ್ನು ನೆಪ ಮಾಡದೆ ಪ್ರತಿಯೊಬ್ಬ ವಿದ್ಯಾರ್ಥಿಯೂ ಶಿಕ್ಷಣದಲ್ಲಿ ಮುನ್ನಡೆಯಬೇಕು. ಸರ್ಕಾರ ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನ ನೀಡುತ್ತಿರುವುದರಿಂದ ಅದರ ಸದ್ಬಳಕೆ ಮಾಡಿಕೊಂಡು ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ಕರೆ ನೀಡಿದರು.

ಗದಗ ಜಿಲ್ಲೆಯ ಮಕ್ಕಳು ಇನ್ನಷ್ಟು ಸಾಧನೆ ಮಾಡಿ ಉನ್ನತ ಹುದ್ದೆಗಳನ್ನು ಅಲಂಕರಿಸಲಿ ಎಂದು ಆಶಿಸಿದರು. ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಪಾಲಕರು ನಿರ್ಲಕ್ಷ್ಯ ತೋರಬಾರದು. ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಪಾಲಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ಜಿಲ್ಲೆಯ ಒಟ್ಟು ಫಲಿತಾಂಶ ಸುಧಾರಣೆಗೆ ಶ್ರಮಿಸಿದ ಜಿಲ್ಲಾಡಳಿತ, ಶಿಕ್ಷಣ ಇಲಾಖೆಯ ಅಧಿಕಾರಿಗಳು ಹಾಗೂ ಶಿಕ್ಷಕ ವೃಂದಕ್ಕೆ ಸಚಿವರು ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಪಾರೂಕ್ ಹುಬ್ಬಳ್ಳಿ, ಬಸವರಾಜ ಕಡೇಮನಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಶರಣು ಗೋಗೇರಿ, ನಡುವಿನಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> "ವಿದ್ಯಾರ್ಜನೆಗೆ ಬಡತನ ಎಂದಿಗೂ ಅಡ್ಡಿಯಾಗುವುದಿಲ್ಲ, ಶ್ರಮ ಮತ್ತು ಸಂಕಲ್ಪ ಇದ್ದರೆ ಯಾವುದೇ ವಿದ್ಯಾರ್ಥಿ ಯಶಸ್ಸು ಸಾಧಿಸಬಹುದು."
>
> – **ಎಚ್.ಕೆ. ಪಾಟೀಲ**, ಜಿಲ್ಲಾ ಉಸ್ತುವಾರಿ ಸಚಿವ.

**ರೂ. 4.89 ಕೋಟಿ ವೆಚ್ಚದ ರಸ್ತೆ–ಚರಂಡಿ ಕಾಮಗಾರಿಗೆ ಶಾಸಕ ಜಿ.ಎಸ್. ಪಾಟೀಲ ಚಾಲನೆ**

# ಸಾಯಿ ನಗರದ ಅಭಿವೃದ್ಧಿಗೆ ಆದ್ಯತೆ



■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ 23ನೇ ವಾರ್ಡ್‌ನ ಶ್ರೀ ಸಾಯಿ ನಗರದ ಸೌಂದರ್ಯ ವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಶ್ರೀ ಸಾಯಿ ನಗರದಲ್ಲಿ ಶಾಸಕರ ಅನುದಾನದಲ್ಲಿ ರೂ. 4.89 ಕೋಟಿ ವೆಚ್ಚದ ಸಿಸಿ ಚರಂಡಿ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಪಟ್ಟಣದ ಎಲ್ಲಾ 23 ವಾರ್ಡ್‌ಗಳ ಅಭಿವೃದ್ಧಿಗೆ ಅನುದಾನ ನೀಡಲಾಗಿದ್ದು, ರೂ. 8 ಕೋಟಿ ವೆಚ್ಚದಲ್ಲಿ ವಿವಿಧ ಕಡೆ ರಸ್ತೆ ಮತ್ತು ಚರಂಡಿ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ಮಾಹಿತಿ ನೀಡಿದರು. ಸಾಯಿ ನಗರದ ಬಹುಕಾಲದ ಬೇಡಿಕೆಯಾದ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾರ್ಯಕ್ಕೆ ಚಾಲನೆ ನೀಡಿರುವುದಾಗಿ ತಿಳಿಸಿದ ಅವರು, ನಾಗರಿಕರು ಅಭಿವೃದ್ಧಿ ಕಾರ್ಯಗಳಿಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಸಾಯಿ ನಗರದಲ್ಲಿ ಶ್ರೀ ಸಾಯಿಬಾಬಾ ಮಂದಿರ ನಿರ್ಮಾಣದ ಬಗ್ಗೆ ಸ್ಥಳೀಯರ ಆಶೆಯನ್ನು ಈಡೇರಿಸಲು ಬದ್ಧನಾಗಿರುವುದಾಗಿ ಹೇಳಿದ ಅವರು, ಅಗತ್ಯ ದಾಖಲೆಗಳನ್ನು ಸಮಿತಿ ಒದಗಿಸಿದರೆ ಸರ್ಕಾರದ ನೆರವು ದೊರೆಯುವುದರ ಜೊತೆಗೆ ವೈಯಕ್ತಿಕ ಸಹಾಯ ಸಹ ನೀಡಲಾಗುವುದು ಎಂದು ಭರವಸೆ ನೀಡಿದರು.

ನಾಗರಿಕರು ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮನೆಗಳ ಮುಂದೆ ಕಸದ ವಾಹನ ಸೌಲಭ್ಯ ಇದ್ದರೂ ರಸ್ತೆ ಬದಿಯಲ್ಲಿ ಕಸ ಹಾಕುವುದು ತಪ್ಪು. ಸ್ವಚ್ಛತೆ ಕಾಪಾಡುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದು ಹೇಳಿದರು.

ನಿವೇಶನ ಖರೀದಿಸುವಾಗ ಅದು ಎನ್‌ಎ ಆಗಿದೆಯೇ ಎಂಬುದನ್ನು ಪರಿಶೀಲಿಸಬೇಕು. ಇಲ್ಲವಾದರೆ ಸರ್ಕಾರಿ ಅನುದಾನ ಸಿಗುವುದಿಲ್ಲ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಗಪ್ಪ ಕುಷ್ಟಗಿ, ವೀರಪ್ಪ ಬೊಳ್ಳಳ್ಳಿ, ರಾಘವೇಂದ್ರ ಧಲಭಂಜನ, ಕೆ.ಎಸ್. ಹಿರೇಮಠ, ಬಾಬುಗೌಡ ಪಾಟೀಲ, ಯೂಸುಫ್ ಇಟಗಿ, ಬಾವಾಸಾಬ ಬೆಟಗೇರಿ, ಆನಂದ ಚಂಗಳಿ, ನಾಜಬೇಗಂ ಯಲಿಗಾರ, ಗೀತಾ ಮಾಡಲಗೇರಿ, ಸಂಗು ನವಲಗುಂದ, ಮಲೀಕ್ ಯಲಿಗಾರ, ಈಶ್ವರ ಕಡಬಲಕಟ್ಟಿ ಸೇರಿದಂತೆ ಪುರಸಭೆಯ ಮುಖ್ಯಾಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

**ಕೆರೆಯನ್ನು ಪ್ರವಾಸಿ ತಾಣವನ್ನಾಗಿಸುವ ಕನಸು**

ಪಟ್ಟಣದ ಹೃದಯ ಭಾಗದಲ್ಲಿರುವ ಕೆರೆಯನ್ನು ಅಭಿವೃದ್ಧಿಪಡಿಸಿ ಪ್ರವಾಸಿ ತಾಣವನ್ನಾಗಿ ರೂಪಿಸುವ ಉದ್ದೇಶದಿಂದ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಮಲಪ್ರಭಾ ನದಿಯ ನೀರಿನಿಂದ ಕೆರೆಯನ್ನು ಭರ್ತಿಗೊಳಿಸಿ ಬೋಟಿಂಗ್ ವ್ಯವಸ್ಥೆ, ಮಕ್ಕಳ ಉದ್ಯಾನವನ, ವಾಯುವಿಹಾರ ಸ್ಥಳ ಹಾಗೂ ಹಿರಿಯ ನಾಗರಿಕರಿಗೆ ವಿಶ್ರಾಂತಿ ಸೌಲಭ್ಯ ಒದಗಿಸಿ ಪಿಕ್‌ನಿಕ್ ಸ್ಪಾಟ್ ಆಗಿ ಅಭಿವೃದ್ಧಿಪಡಿಸುವ ಕನಸು ಹೊಂದಿದ್ದೇನೆ.

ಆದರೆ ಅಗತ್ಯ ಸಹಕಾರ ಸಿಗದೆ ಇರುವುದರಿಂದ ಬೇಸರವಾಗಿದೆ ಎಂದು ಹೇಳಿದರು.

**ನಿರ್ಮಾಣ ಕಾಮಗಾರಿಗಳಲ್ಲಿ ಶೇ.1 ಸುಂಕ ಪರಿಶೀಲನೆಗೆ ಸೂಚನೆ: ಡಾ. ದುರಗೇಶ್ ಕೆ.ಆರ್.**

## ವಸೂಲು ಮಾಡಿದ ಸುಂಕವನ್ನು ಕಟ್ಟುನಿಟ್ಟಾಗಿ ಮಂಡಳಿಗೆ ರವಾನಿಸಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸುಂಕ ಸಂಗ್ರಹಣಾ ಮೇಲ್ವಿಚಾರಣಾ ಸಮಿತಿ ಸಭೆಯು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲಾ ಪಂಚಾಯತ್ ಹಾಗೂ ವಿವಿಧ ಇಲಾಖೆಗಳ ಮೂಲಕ ಕೈಗೊಳ್ಳಲಾಗುತ್ತಿರುವ ನಿರ್ಮಾಣ ಕಾಮಗಾರಿಗಳಿಗೆ ಸಂಬಂಧಿಸಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಗೆ ಶೇ.1 ರಷ್ಟು ಸುಂಕವನ್ನು ಭರಿಸಿರುವುದನ್ನು ಪರಿಶೀಲಿಸಬೇಕು ಎಂದು ಸೂಚಿಸಿದರು.

ಸರ್ಕಾರದ ಯಾವುದೇ ಇಲಾಖೆ, ಸಾರ್ವಜನಿಕ ಪ್ರಾಧಿಕಾರ ಅಥವಾ ಸ್ಥಳೀಯ ಸಂಸ್ಥೆಗಳು ವಸೂಲು ಮಾಡಿದ ಸುಂಕವನ್ನು ಮಂಡಳಿಗೆ ರವಾನಿಸದೇ ಇದ್ದಲ್ಲಿ ತಕ್ಷಣವೇ ಕ್ರಮ ಕೈಗೊಂಡು ರವಾನಿಸಬೇಕು. ಈ ಕುರಿತು ಪ್ರತಿ ತಿಂಗಳು ಸಭೆ ನಡೆಸಿ ಪ್ರಗತಿ ಪರಿಶೀಲನೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

ನಿರ್ಮಾಣ ಕಾಮಗಾರಿಗಳ ವೆಚ್ಚ ಪಾವತಿಸುವ ವೇಳೆ ಮೂಲದಲ್ಲೇ ಶೇ.1 ಸುಂಕವನ್ನು ಕಡಿತಗೊಳಿಸಿ ಮಂಡಳಿಗೆ ಸಲ್ಲಿಸಬೇಕು. ನಗರ ಸ್ಥಳೀಯ ಸಂಸ್ಥೆಗಳು ನಕ್ಷೆ ಅನುಮೋದನೆ ಅಥವಾ ಪರವಾನಿಗೆ ನೀಡುವಾಗಲೂ ಇದೇ ಪ್ರಮಾಣದ ಸುಂಕವನ್ನು ಪಡೆದು ರವಾನಿಸುವುದು ಕಡ್ಡಾಯ ಎಂದು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು ನೀಡಿದ ಅನುಮೋದನೆಗಳ ಪರಿಶೀಲನೆ ನಡೆಸಿ, ಮಾಲೀಕರು ಮತ್ತು ನಿಯೋಜಕರಿಂದ ವಸೂಲು ಮಾಡಿದ ಸುಂಕವನ್ನು ಸರಿಯಾಗಿ ಮಂಡಳಿಗೆ ಸಲ್ಲಿಸಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಹೇಳಿದರು.

▸▸ 4ನೇ ಪುಟಕ್ಕೆ

**ಓಬಿಸಿ 'ಎ' ಮೀಸಲಾತಿ ನಡುವೆ ಯಾರಿಗೆ ಸಿಗಲಿದೆ ಹಗರಿಬೊಮ್ಮನಹಳ್ಳಿ ಅಧ್ಯಕ್ಷ ಸ್ಥಾನ?**

# ಪುರಸಭೆ ಅಧ್ಯಕ್ಷ ಗಾದೆಗಾಗಿ ಕಸರತ್ತು ತೀವ್ರ!

**ಭೀಮಾನಾಯ್ಕರೇ 'ಮಿನಿ ಹೈಕಮಾಂಡ್'**

ಪುರಸಭೆಯ ರಾಜಕೀಯದಲ್ಲಿ ಮಾಜಿ ಶಾಸಕ ಭೀಮಾನಾಯ್ಕ ಪ್ರಮುಖ ಪಾತ್ರ ವಹಿಸುತ್ತಿದ್ದು, ಅವರ ನಿರ್ಧಾರವೇ ಅಂತಿಮವಾಗಲಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

* ಬಿಜೆಪಿಯಲ್ಲಿ ಅಸಮಾಧಾನ– ಕಾಂಗ್ರೆಸ್‌ಗೆ ಮೇಲುಗೈ
* ಬಿಜೆಪಿಯಲ್ಲಿ ಸಮಸ್ಯೆಗಳು ಮುಂದುವರಿದಿದ್ದು, ಕೆಲ ಸದಸ್ಯರು ಕಾಂಗ್ರೆಸ್ ಕಡೆಗೆ ವಾಲಿರುವುದು ಗಮನಾರ್ಹವಾಗಿದೆ.
* ಬಿಜೆಪಿ–ಜೆಡಿಎಸ್ ಮೈತ್ರಿ ರಾಜ್ಯ ಹಾಗೂ ಕೇಂದ್ರ ಮಟ್ಟದಲ್ಲಿ ಇದ್ದರೂ, ಸ್ಥಳೀಯ ಮಟ್ಟದಲ್ಲಿ ಅದರ ಪರಿಣಾಮ ಕಾಣುತ್ತಿಲ್ಲ.
* ಸದ್ಯ ಕಾಂಗ್ರೆಸ್‌ಗೆ 12 ಸದಸ್ಯರ ಬಲವಿದ್ದರೆ, ಬಿಜೆಪಿಗೆ 11 ಸದಸ್ಯರ ಬಲವಿದೆ. ಆದರೆ ಪರಿಣಾಮಕಾರಿ ನಾಯಕತ್ವದ ಕೊರತೆಯಿಂದ ಬಿಜೆಪಿ ಹಿನ್ನಡೆ ಅನುಭವಿಸುತ್ತಿದೆ.
* ಇದರಿಂದಾಗಿ ಈ ಬಾರಿ ಪುರಸಭೆ ಅಧ್ಯಕ್ಷ ಸ್ಥಾನ ಕಾಂಗ್ರೆಸ್ ಪಾಲಾಗುವುದು ಬಹುತೇಕ ಖಚಿತ ಎನ್ನುವ ವಿಶ್ಲೇಷಣೆ ಕೇಳಿ ಬರುತ್ತಿದೆ.



■ ಸರ್ದಾರ್ ಯಮನೂರಪ್ಪ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಪುರಸಭೆಯ ಅಧ್ಯಕ್ಷ ಗಾದೆಯ ಎರಡನೇ ಅವಧಿಗೆ ರಾಜಕೀಯ ಚಟುವಟಿಕೆಗಳು ತೀವ್ರಗೊಂಡಿದ್ದು, ಯಾರಿಗೆ ಗಾದಿ ಒಲಿಯಲಿದೆ ಎಂಬ ಕುತೂಹಲ ಹೆಚ್ಚಾಗಿದೆ.

ಹಿಂದಿನ ಅವಧಿಯಲ್ಲಿ ಹತ್ತು ತಿಂಗಳ ಒಪ್ಪಂದದ ನಡುವೆಯೇ ಅಧಿಕಾರಾವಧಿ ವಿಸ್ತರಣೆ ವಿಚಾರವಾಗಿ ಉಂಟಾದ ಭಿನ್ನಾಭಿಪ್ರಾಯಗಳಿಂದ ಅಧ್ಯಕ್ಷ ಸ್ಥಾನ ಬದಲಾವಣೆ ನಡೆದಿದ್ದು, ಈಗ ಹೊಸ ಚುನಾವಣೆ ಎಪ್ರಿಲ್ 30ರಂದು ನಡೆಯಲಿದೆ. ಈ ಬಾರಿ ಓಬಿಸಿ 'ಎ' ವರ್ಗಕ್ಕೆ ಮೀಸಲಾದ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗುವವರಿಗೆ ಉಳಿದಿರುವುದು ಕೇವಲ ಹತ್ತು ತಿಂಗಳ ಅವಧಿ ಮಾತ್ರವಾಗಿದ್ದು, ಹಲವು ಆಕಾಂಕ್ಷಿಗಳು ರೇಸ್‌ನಲ್ಲಿ ಕಾಣಿಸಿಕೊಂಡಿದ್ದಾರೆ.

ಕಾಂಗ್ರೆಸ್ ವಲಯದಲ್ಲಿ ನೆಲ್ಲು ಇಸ್ಮಾಯಿಲ್ ಹೆಸರು ಬಲವಾಗಿ ಕೇಳಿ ಬರುತ್ತಿದ್ದು, ಪಕ್ಷದ ನಿಷ್ಠೆ ಹಾಗೂ ಹಿಂದಿನ ಚುನಾವಣೆಯಲ್ಲಿ ನೀಡಿದ ಬೆಂಬಲ ಅವರ ಪ್ರಮುಖ ಬಲವಾಗಿ ಪರಿಣಮಿಸಿದೆ ಎನ್ನಲಾಗುತ್ತಿದೆ.

ಇನ್ನೊಬ್ಬ ಅಭ್ಯರ್ಥಿ ಅಜೀಜುಲ್ಲ ಕೂಡ ಹೆಸರು ಮಾಡುತ್ತಿದ್ದರೂ, ಸಮಯಾವಕಾಶ ಕಡಿಮೆ ಇರುವುದರಿಂದ ಅವರು ಹೆಚ್ಚಿನ ಆಸಕ್ತಿ ತೋರಿಸುತ್ತಿಲ್ಲ ಎಂಬ ಮಾತುಗಳು ಕೇಳಿಬರುತ್ತಿವೆ. ಮಹಿಳಾ ಅಭ್ಯರ್ಥಿಗಳ ಪೈಕಿ ರೇಷ್ಮಾ ಸಿಖಂದರ್ ಹೆಸರು ಪ್ರಬಲವಾಗಿದ್ದು, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆಯಾಗಿರುವ ಹಿನ್ನೆಲೆ ರಾಜಕೀಯ ಪ್ರಭಾವ ಹೊಂದಿದ್ದಾರೆ. ಅವರೊಂದಿಗೆ ಡಾ. ಸಾಹಿರಾಬಾನು ಬೆಂಬಲವೂ ಇದೆ ಎನ್ನಲಾಗುತ್ತಿದೆ.

ಇನ್ನೊಂದು ವಿಶ್ಲೇಷಣೆಯ ಪ್ರಕಾರ, ಈಗಾಗಲೇ ಉಪಾಧ್ಯಕ್ಷ ಸ್ಥಾನ ಮಹಿಳೆಗೆ ಸಿಕ್ಕಿರುವುದರಿಂದ ಮತ್ತೊಮ್ಮೆ ಅಧ್ಯಕ್ಷ ಸ್ಥಾನ ಮಹಿಳೆಗೆ ಸಿಗುವ ಸಾಧ್ಯತೆ ಕಡಿಮೆ ಎಂದು ಅಂದಾಜಿಸಲಾಗಿದೆ. ಖಾಜಾಬನ್ನಿ ಅಲ್ಲಾಭಕ್ಷಿ ಹಾಗೂ ಗುಂಡ್ರು ಸರಸ್ವತಿ ಅವರ ಹೆಸರುಗಳೂ ಕೇಳಿಬರುತ್ತಿದ್ದು, ಅಂತಿಮ ಕ್ಷಣದಲ್ಲಿ ರಾಜಕೀಯ ಸಮೀಕರಣಗಳು ಬದಲಾಗುವ ಸಾಧ್ಯತೆಗಳನ್ನು ನಿರಾಕರಿಸಲಾಗುವುದಿಲ್ಲ.

ಸರಳ ಸ್ವಭಾವದ, ಯಾರಿಗೂ ತೊಂದರೆ ಕೊಡದ ವ್ಯಕ್ತಿಯಾಗಿರುವುದರಿಂದ ಇಸ್ಮಾಯಿಲ್ ಅವರಿಗೆ ಬೆಂಬಲ ದೊರೆಯುವ ಸಾಧ್ಯತೆ ಹೆಚ್ಚು" ಎಂದು ಕಾಂಗ್ರೆಸ್ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

**ಮಿಲಾಂಜೆ-2026 ಉದ್ಘಾಟನೆ: ಹೊಸ ಅನ್ವೇಷಣೆಗೆ ವಿದ್ಯಾರ್ಥಿಗಳಿಗೆ ಮಹೇಶ್ ಪಾಟೀಲ ಕರೆ**

# ಶ್ರದ್ಧೆ-ಪರಿಶ್ರಮದಿಂದ ಯಶಸ್ಸು ಸಾಧ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಹೊಸ ಅನ್ವೇಷಣೆ ಹಾಗೂ ಸಂಶೋಧನೆಗಳಲ್ಲಿ ತೊಡಗಿಸಿಕೊಳ್ಳಬೇಕು. ಅದಕ್ಕಾಗಿ ಶಿಕ್ಷಕರ ಮಾರ್ಗದರ್ಶನ ಮತ್ತು ಪ್ರೋತ್ಸಾಹ ಅತ್ಯಗತ್ಯವಾಗಿದೆ ಎಂದು ಮಹೇಶ್ ಪಾಟೀಲ್ ಹೇಳಿದರು.

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ "ಮಿಲಾಂಜೆ-2026" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಶ್ರದ್ಧೆ, ಪ್ರಾಮಾಣಿಕತೆ ಮತ್ತು ಪರಿಶ್ರಮದಿಂದ ಯಾವುದೇ ಕೆಲಸವನ್ನು ಧೈರ್ಯದಿಂದ ಕೈಗೊಂಡರೆ ಖಂಡಿತ ಯಶಸ್ಸು ಸಾಧಿಸಬಹುದು ಎಂದು ಹೇಳಿದರು.

ವಿದ್ಯಾರ್ಥಿಗಳು ಸದಾ ಕ್ರಿಯಾಶೀಲರಾಗಿದ್ದು, ಹೊಸ ಹೊಸ ಅನ್ವೇಷಣೆಗಳತ್ತ ಗಮನ ಹರಿಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಪರಶುರಾಮ ಬಾರಕಿ ವಹಿಸಿದ್ದರು. ಈ ಸಂದರ್ಭದಲ್ಲಿ ಡಾ. ಸುಭಾಸ್ ಮೇಟಿ, ಪ್ರೊ. ವಿಕ್ರಂ ಶಿರೋಳ, ಡಾ. ಆರ್. ಎಂ. ಪಾಟೀಲ, ಡಾ. ಗಿರೀಶ್ ಯತ್ತಿನಹಳ್ಳಿ, ಪ್ರೊ. ಈರಣ್ಣ ಮಕರಬ್ಬಿ, ಪ್ರೊ. ಪ್ರತಿಮಾ ಮಹಾಪುರುಷ, ಪ್ರೊ. ಗಿರೀಶ ಹಳ್ಳಿ ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವರ್ಷಿಣಿ ಮಡಿವಾಳರ ಮತ್ತು ವರ್ಷಿಣಿ ಮಾಳಗಿ ಕಾರ್ಯಕ್ರಮವನ್ನು ನಿರ್ವಹಿಸಿದರು. ಬಳಿಕ ವಿವಿಧ ವಿಭಾಗಗಳಿಂದ ತಾಂತ್ರಿಕ ಹಾಗೂ ತಾಂತ್ರಿಕೇತರ ಸ್ಪರ್ಧೆಗಳು ನಡೆಯಿತು. ರಾಜ್ಯದ ವಿವಿಧ ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು.

# ಶಾಲೆಗಳಲ್ಲಿ ಕನ್ನಡ ದಿನಪತ್ರಿಕೆ ಓದುವ ಅಭ್ಯಾಸ ಕಡ್ಡಾಯ

## ಡಿಜಿಟಲ್ ವ್ಯಸನ ಕಡಿಮೆ ಮಾಡಿ ಜ್ಞಾನ ವೃದ್ಧಿಗೆ ಶಿಕ್ಷಣ ಇಲಾಖೆಯ ಮಹತ್ವದ ಹೆಜ್ಜೆ

ಇಂದಿನ ಡಿಜಿಟಲ್ ಯುಗದಲ್ಲಿ ಸ್ಮಾರ್ಟ್‌ಫೋನ್, ಟ್ಯಾಬ್ಲೆಟ್ ಹಾಗೂ ಕಂಪ್ಯೂಟರ್‌ಗಳ ಬಳಕೆ ಹೆಚ್ಚುತ್ತಿರುವುದರಿಂದ ಮಕ್ಕಳ ಓದುವ ಅಭ್ಯಾಸ ಕುಗ್ಗುತ್ತಿರುವುದು ಗಮನಾರ್ಹವಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಪ್ರತಿದಿನ ಬೆಳಗಿನ ಪ್ರಾರ್ಥನೆಯ ನಂತರ ಕನಿಷ್ಠ 10 ನಿಮಿಷಗಳ ಕಾಲ ಕನ್ನಡ ದಿನಪತ್ರಿಕೆ ಓದುವ ಅಭ್ಯಾಸವನ್ನು ಕಡ್ಡಾಯಗೊಳಿಸುವ ಮಹತ್ವದ ಕ್ರಮ ಕೈಗೊಳ್ಳಲಾಗಿದೆ.




"ಪುಸ್ತಕದಷ್ಟು ನಿಷ್ಠಾವಂತ ಸ್ನೇಹಿತ ಇನ್ನೊಂದಿಲ್ಲ" ಎಂಬ ಅರ್ನೆಸ್ಟ್ ಹೆಮಿಂಗ್ವೇ ಅವರ ಮಾತು ನೂರಕ್ಕೆ ನೂರು ಸತ್ಯ. ಪುಸ್ತಕಗಳು ಮನುಷ್ಯನ ಅತ್ಯುತ್ತಮ ಸ್ನೇಹಿತರಾಗಿದ್ದು, ಅವುಗಳು ಓದುಗರನ್ನು ಎಂದಿಗೂ ಕೈಬಿಡುವುದಿಲ್ಲ. ಅವು ಜ್ಞಾನ ನೀಡುವುದರ ಜೊತೆಗೆ ವ್ಯಕ್ತಿತ್ವವನ್ನು ರೂಪಿಸುತ್ತವೆ.

**ಡಿಜಿಟಲ್ ಯುಗದ ಸವಾಲು:** ಇಂದಿನ ದಿನಗಳಲ್ಲಿ ಮಕ್ಕಳು ಇಂಟರ್‌ನೆಟ್, ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚಿನ ಸಮಯ ಕಳೆಯುತ್ತಿದ್ದಾರೆ. ಇದರ ಪರಿಣಾಮವಾಗಿ ಜ್ಞಾಪಕಶಕ್ತಿ ಕುಗ್ಗುವುದು, ದೈಹಿಕ ಚಟುವಟಿಕೆಗಳಲ್ಲಿ ಆಸಕ್ತಿ ಕಡಿಮೆಯಾಗುವುದು ಹಾಗೂ ಮಾನಸಿಕ ಸಮಸ್ಯೆಗಳು ಹೆಚ್ಚುತ್ತಿರುವುದು ಕಂಡುಬರುತ್ತಿದೆ.




**ಹಿನ್ನೆಲೆ:** ರಾಜ್ಯದಲ್ಲಿ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಯನ್ನು ನಿಯಂತ್ರಿಸುವ ಕುರಿತು ಚರ್ಚೆ ನಡೆಯುತ್ತಿರುವ ಸಂದರ್ಭದಲ್ಲಿ, ಮಕ್ಕಳನ್ನು ಓದಿನತ್ತ ಸೆಳೆಯಲು ಈ ಕ್ರಮ ಕೈಗೊಳ್ಳಲಾಗಿದೆ. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಶಿಫಾರಸ್ಸಿನ ಮೇರೆಗೆ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ.

**ಆದೇಶದಲ್ಲಿರುವ ಅಂಶಗಳು:** ಮಕ್ಕಳು ದಿನನಿತ್ಯ ಕನಿಷ್ಠ 10 ರಿಂದ 15 ನಿಮಿಷ ದಿನಪತ್ರಿಕೆ ಓದುವ ಅಭ್ಯಾಸ ಬೆಳೆಸಿಕೊಳ್ಳುವುದರಿಂದ ಪ್ರಚಲಿತ ವಿದ್ಯಮಾನಗಳ ಅರಿವು, ಸಾಮಾನ್ಯ ಜ್ಞಾನ, ಶಬ್ದಕೋಶ, ಭಾಷಾ ಶೈಲಿ ಹಾಗೂ ಬರವಣಿಗೆ ಕೌಶಲ್ಯಗಳಲ್ಲಿ ಸುಧಾರಣೆ ಕಂಡುಬರುತ್ತದೆ. ಇದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ಸುಲಭವಾಗುತ್ತದೆ.

**ಉದ್ದೇಶ:** ಮೊಬೈಲ್ ವ್ಯಸನ ಕಡಿಮೆ ಮಾಡುವುದು. ಓದುವ ಹವ್ಯಾಸ ಬೆಳೆಸುವುದು.ಸಾಮಾನ್ಯ ಜ್ಞಾನ ವೃದ್ಧಿ.ಭಾಷಾ ಹಾಗೂ ಬರವಣಿಗೆ ಕೌಶಲ್ಯ ಅಭಿವೃದ್ಧಿ.

**ಪ್ರಯೋಜನಗಳು:** ಪುಸ್ತಕಗಳು ಮತ್ತು ದಿನಪತ್ರಿಕೆಗಳು ಜ್ಞಾನದ ಭಂಡಾರವಾಗಿವೆ. ಅವು ಏಕಾಂತದಲ್ಲಿ ಉತ್ತಮ ಸ್ನೇಹಿತರಾಗಿದ್ದು, ಮನಸ್ಸಿಗೆ ನೆಮ್ಮದಿ ನೀಡುತ್ತವೆ. ಓದುವ ಅಭ್ಯಾಸದಿಂದ ಚಿಂತನೆ ಶಕ್ತಿ ವೃದ್ಧಿಯಾಗುತ್ತದೆ ಮತ್ತು ವ್ಯಕ್ತಿತ್ವ ನಿರ್ಮಾಣಕ್ಕೆ ನೆರವಾಗುತ್ತದೆ.

ಒಟ್ಟಾರೆಯಾಗಿ, ದಿನಪತ್ರಿಕೆ ಓದುವ ಅಭ್ಯಾಸವು ಮಕ್ಕಳನ್ನು ಡಿಜಿಟಲ್ ವ್ಯಸನದಿಂದ ದೂರವಿಟ್ಟು ಜ್ಞಾನಪೂರ್ಣ ಹಾಗೂ ಸಂಸ್ಕಾರಯುತ ಜೀವನದತ್ತ ಕೊಂಡೊಯ್ಯುತ್ತದೆ.



ಮಕ್ಕಳಿಗೆ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಓದುವ ಹವ್ಯಾಸ ಬೆಳೆಸುವಲ್ಲಿ ಪೋಷಕರ ಪಾತ್ರ ಅತ್ಯಂತ ಮುಖ್ಯವಾಗಿದೆ.

**– ಬಸವರಾಜ ಎಂ. ಯರಗುಪ್ಪಿ**
ಶಿಕ್ಷಕರು ಹಾಗೂ ಹವ್ಯಾಸಿ ಬರಹಗಾರರು.

# ಸಂಪತ್ತಿಗಿಂತ ತೃಪ್ತಿಯೇ ಮುಖ್ಯ

## ಭೌತಿಕ ಸಾಧನೆಗಳ ನಡುವೆ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿವೆ- ರಂಭಾಪುರಿ ಶೀಗಳು



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಇತ್ತೀಚಿನ ದಿನಗಳಲ್ಲಿ ಮನುಷ್ಯನು ಎಷ್ಟೇ ಭೌತಿಕ ಸಂಪತ್ತು ಹಾಗೂ ಅಧಿಕಾರದ ಸ್ಥಾನಮಾನವನ್ನು ಪಡೆದರೂ ತೃಪ್ತಿ, ಸಮಾಧಾನ ಕಡಿಮೆಯಾಗುತ್ತಿದೆ ಎಂದು ಬಾಳೆಹೊನ್ನೂರಿನ ಶ್ರೀಮದ್ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗತ್ಪಾದರು ವಿಷಾದ ವ್ಯಕ್ತಪಡಿಸಿದರು.

ತಾಲ್ಲೂಕಿನ ಗಿರಿಗೊಂಡನಹಳ್ಳಿ (ಸಾಲ್ಮೂರಹಳ್ಳಿ) ಗ್ರಾಮದಲ್ಲಿ ನಡೆದ ಶ್ರೀ ವಿಘ್ನೇಶ್ವರ, ಈಶ್ವರ, ಬಸವೇಶ್ವರ, ಆಂಜನೇಯ ಸ್ವಾಮಿ ಹಾಗೂ ನಾಗದೇವತೆ ನೂತನ ಮೂರ್ತಿ ಪ್ರತಿಷ್ಠಾಪನೆ ಮತ್ತು ಜೋಡು ಗೋಪುರಗಳ ಕಳಸಾರೋಹಣ ಕಾರ್ಯಕ್ರಮದ ಅಂಗವಾಗಿ ನಡೆದ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಧಾರ್ಮಿಕ ಸಭೆಯಲ್ಲಿ ಅವರು ಆಶೀರ್ವಚನ ನೀಡಿದರು.

ಮನುಷ್ಯನ ಆಸೆಗಳು ಇತಿಮಿತಿಗಳಲ್ಲಿ ಇರಬೇಕು. ದೇವರ ಮೇಲಿನ ನಂಬಿಕೆಯನ್ನು ಕಳೆದುಕೊಳ್ಳಬಾರದು. "ದೇವನೊಬ್ಬ, ನಾಮ ಹಲವು" ಎಂಬ ಭಾವನೆ ಬೆಳೆದರೆ ದ್ವೇಷ ನಿವಾರಣೆಯಾಗಿದ್ದು, ಸಾಮರಸ್ಯ ಮತ್ತು ಸದ್ಭಾವನೆ ವೃದ್ಧಿಯಾಗುತ್ತದೆ ಎಂದು ಹೇಳಿದರು. ದೇವರು ನೀಡಿದ ನೆಲ, ನೀರು, ಅನ್ನ, ಗಾಳಿ ಎಂಬ ಅಮೂಲ್ಯ ಕೊಡುಗೆಗಳಿಗೆ ಪರ್ಯಾಯವಿಲ್ಲ ಎಂದರು.

> "ಮನುಷ್ಯ ಎಷ್ಟೇ ಸಂಪತ್ತು ಹಾಗೂ ಅಧಿಕಾರ ಪಡೆದರೂ ತೃಪ್ತಿ ಸಿಗುವುದಿಲ್ಲ; ಆಸೆಗಳು ಇತಿಮಿತಿಯಲ್ಲಿದ್ದು, ಧರ್ಮ ಮತ್ತು ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡಾಗಲೇ ನಿಜವಾದ ಸಮಾಧಾನ ದೊರೆಯುತ್ತದೆ."
>
> **– ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ** ಶಿವಾಚಾರ್ಯ ಭಗತ್ಪಾದರು

ಧರ್ಮ, ಜಾತಿ, ಭಾಷೆ ಹಾಗೂ ಪ್ರಾಂತೀಯತೆ ಹೆಸರಿನಲ್ಲಿ ನಡೆಯುತ್ತಿರುವ ದುರ್ಘಟನೆಗಳು ವಿಷಾದನೀಯ. ಮಾನವ ಧರ್ಮ ಉಳಿದರೆ ಮಾತ್ರ ಸಮಾಜ ಬೆಳೆಯಲು ಸಾಧ್ಯ. ಸಮಾನತೆ, ಸಹೋದರತ್ವ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

"ಹುಟ್ಟು ಸಹಜವಾದರೆ ಸಾವು ನಿಶ್ಚಿತ. ಜೀವನವೆಂಬುದು ತೆರೆದ ಪುಸ್ತಕದಂತೆ; ಹುಟ್ಟು-ಸಾವಿನ ನಡುವೆ ಇರುವ ಪುಟಗಳನ್ನು ಸುಂದರವಾಗಿ ಬರೆಯುವುದು ನಮ್ಮ ಹೊಣೆ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಂಪಸಾಗರ ನವಲಿ ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ರಾಜ್ಯ ಕಾಂಗ್ರೆಸ್ ಒಬಿಸಿ ಘಟಕದ ಉಪಾಧ್ಯಕ್ಷ ಹೊಳಗುಂದಿ ಹನುಮಜ್ಜ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪರಿಶ್ರಮ- ಸಾಧನೆ ಇತರ ವಿದ್ಯಾರ್ಥಿಗಳಿಗೆ ಸ್ಫೂರ್ತಿ: ಮಿಥುನ್ ಪಾಟೀಲ್

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ವಿದ್ಯಾರ್ಥಿಯ ಸಾಧನೆ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದ್ದು, ಗ್ರಾಮೀಣ ಪ್ರದೇಶ ವಿದ್ಯಾರ್ಥಿ ಉತ್ತಮ ಫಲಿತಾಂಶ ತಂದುಕೊಟ್ಟಿರುವುದು ಶಿಕ್ಷಣದ ಗುಣಮಟ್ಟ ಹೆಚ್ಚುತ್ತಿರುವುದಕ್ಕೆ ಸಾಕ್ಷಿಯಾಗಿದೆ" ಎಂದು ಕಾಂಗ್ರೆಸ್ ಪಕ್ಷದ ಯುವ ಮುಖಂಡ ಮಿಥುನ್ ಪಾಟೀಲ್ ಹೇಳಿದರು.

ಅವರು ಶನಿವಾರ ಸೂಡಿ ಗ್ರಾಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ

ವಿದ್ಯಾರ್ಥಿ ಪ್ರವೀಣಕುಮಾರ ಸೊಬಗಿನ ಅವರ ನಿವಾಸದಲ್ಲಿ ಸನ್ಮಾನಿಸಿ ಮಾತನಾಡಿದರು.

ಗದಗ ಜಿಲ್ಲಾ ಮಟ್ಟದಲ್ಲಿ ಅಪ್ರತಿಮ ಸಾಧನೆ ಮಾಡುವ ಮೂಲಕ ಪ್ರಥಮ ಸ್ಥಾನ ಪಡೆದು ತಾಲೂಕಿಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಯ ಸಾಧನೆಯನ್ನು ಸರ್ವರೂ ಮೆಚ್ಚುವಂಥದ್ದು ಎಂದರು.



ವಿದ್ಯಾರ್ಥಿಯ ಈ ಐತಿಹಾಸಿಕ ಸಾಧನೆಗೆ ತಾಲೂಕಿನಾದ್ಯಂತ ಸಾರ್ವಜನಿಕರು ಮತ್ತು ಶಿಕ್ಷಣ ಪ್ರೇಮಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ವಿದ್ಯಾರ್ಥಿಯ ಸಾಧನೆ ಇಷ್ಟಕ್ಕೆ ಸೀಮಿತವಾಗಿರದೆ ನಿರಂತರ ಓದು ವಿದ್ಯಾರ್ಥಿಗಳಿಗಳ ಜೀವನ ಸುಧಾರಣೆ ಮಾಡುವುದಲ್ಲದೆ, ಸಾರ್ಥಕ ಮಾಡುತ್ತದೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ ಮಾತನಾಡಿ,

ಎಸ್‌ಎಸ್‌ಎಲ್‌ಸಿ ಪರೀಕ್ಷೆ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಪ್ರಮುಖ ಹಂತವಾಗಿದ್ದು, ಈ ಹಂತದಲ್ಲಿ ಸಾಧನೆ ಮಾಡಿದವರು ಮುಂದಿನ ದಿನಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿಯೂ ಮುಂದಿರುವ ಮೂಲಕ ಉನ್ನತ ಹುದ್ದೆಗಳನ್ನು ಅಲಂಕರಿಸಬಹುದು ಅಂತಹ ಪ್ರತಿಭೆಯನ್ನು ಹೊಂದಿರುವ ನಮ್ಮ ಗ್ರಾಮದ ಪ್ರವೀಣಕುಮಾರ ಸೊಬಗಿನ ಅವರಿಗೆ ಎದುರಾಗುವ ಸಮಸ್ಯೆಗಳಿಗೆ ಸಹಾಯ ಸಹಕಾರ ನೀಡಲು ಸದಾ ಸಿದ್ಧ ಎಂದು ಕ್ಷೇತ್ರ ಶಾಸಕ ಜಿ ಎಸ್ ಪಾಟೀಲರು ತಿಳಿಸಿದ್ದಾರೆ ಎಂದರು.

ಈ ಕಾರ್ಯಕ್ರಮದಲ್ಲಿ ಶಿವಕುಮಾರ ಪಟ್ಟಣಶೆಟ್ಟಿ, ಅನ್ವರ್ ಇಟಗಿ, ಶರೀಫ್ ಡಾಲಾಯತ, ವೀರೇಶ ಪಟ್ಟಣಶೆಟ್ಟರ, ಶಶಿಧರ ವಕ್ಲರ, ಪ್ರಕಾಶ ಕುಬಸದ, ಮಲ್ಲಯ್ಯ ಭಿಕ್ಷಾವತಿಮಠ, ಅಂಬರೀಶ್ ಅಪ್ಪಣ್ಣವರ, ಶರಣಪ್ಪ ಗೊರವರ, ಚನ್ನಪ್ಪ ನೂಲ್ವಿ ಸೇರಿದಂತೆ ಊರಿನ ಹಿರಿಯರು- ಮುಖಂಡರು ಇದ್ದರು.

# ವಿಸ್ಮಯ ಶಿಬಿರದಲ್ಲಿ ವಿಜ್ಞಾನ ಸಂವಾದ

## ಬೆಳಕು, ಪ್ರತಿಫಲನ ಕುರಿತು ವಿದ್ಯಾರ್ಥಿಗಳಿಗೆ ಆಸಕ್ತಿದಾಯಕ ಉಪನ್ಯಾಸ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ವಿಸ್ಮಯ ಬೇಸಿಗೆ ಶಿಬಿರದ 9ನೇ ದಿನದ ಅಂಗವಾಗಿ ಡಾ. ಅಜಯರಾಜು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ವಿದ್ಯಾರ್ಥಿಗಳೊಂದಿಗೆ ಅರ್ಥಪೂರ್ಣ ವಿಜ್ಞಾನ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಅವರು ಬೆಳಕು ಮತ್ತು ಅದರ ಪ್ರತಿಫಲನದ ನೈಸರ್ಗಿಕ ಪ್ರಕ್ರಿಯೆಗಳ ಬಗ್ಗೆ ಸರಳವಾಗಿ ವಿವರಿಸಿದರು. ದಿನನಿತ್ಯ ಜೀವನದಲ್ಲಿ ಕಾಣುವ ಬೆಳಕಿನ ವೈಜ್ಞಾನಿಕ ಅಂಶಗಳನ್ನು ಉದಾಹರಣೆಗಳೊಂದಿಗೆ ತಿಳಿಸಿ, ವಿದ್ಯಾರ್ಥಿಗಳಲ್ಲಿ ವಿಜ್ಞಾನಾಸಕ್ತಿ ಮೂಡಿಸಿದರು. ವಿವಿಧ ಕೌತುಕಗಳನ್ನು ಹಂಚಿಕೊಂಡು ಪ್ರಶ್ನೋತ್ತರಗಳ ಮೂಲಕ ಮಕ್ಕಳ ಚಿಂತನಾ ಶಕ್ತಿಯನ್ನು ಉತ್ತೇಜಿಸಿದರು. ಬೆಳಕಿನ ಪ್ರತಿಫಲನ ಹಾಗೂ ಅದರ ನಿಯಮಗಳ ಕುರಿತು ನೀಡಿದ ಉಪನ್ಯಾಸವು ವಿದ್ಯಾರ್ಥಿಗಳಲ್ಲಿ ವಿಜ್ಞಾನಪ್ರೇಮವನ್ನು ಹೆಚ್ಚಿಸಿತು.

ಇನ್ನೋರ್ವ ಮುಖ್ಯ ಅತಿಥಿ ಶಿಕ್ಷಣಾಧಿಕಾರಿ ಸರಸ್ವತಿ ಕನವಳ್ಳಿ ಮಾತನಾಡಿ, "ಸಾಹಿತಿಗಳಿಗೆ ಚಂದ್ರನು ಒಂದು ರೀತಿಯಲ್ಲಿ ಕಂಡರೆ, ವಿಜ್ಞಾನಿಗಳಿಗೆ ಮತ್ತೊಂದು ರೀತಿಯಲ್ಲಿ ಕಾಣುತ್ತಾನೆ" ಎಂದು ಹೇಳಿದರು. ಸಾಹಿತ್ಯದಲ್ಲಿ ಚಂದ್ರನು ಪ್ರೀತಿ, ಸೌಂದರ್ಯ ಹಾಗೂ ಭಾವನೆಯ ಸಂಕೇತವಾಗಿದ್ದರೆ, ವಿಜ್ಞಾನದಲ್ಲಿ ಅದು ಭೂಮಿಯನ್ನು ಸುತ್ತುವ ನೈಸರ್ಗಿಕ ಉಪಗ್ರಹವಾಗಿದ್ದು, ಅದರ ಮೇಲ್ಮೈ, ಆಕರ್ಷಣ ಶಕ್ತಿ ಹಾಗೂ ಬೆಳಕಿನ ಪ್ರತಿಫಲನದ ವೈಜ್ಞಾನಿಕ ಅಂಶಗಳನ್ನು ಅಧ್ಯಯನ ಮಾಡಲಾಗುತ್ತದೆ ಎಂದು ವಿವರಿಸಿದರು. ಚಂದ್ರನ ಬೆಳಕು ಸೂರ್ಯನ ಪ್ರತಿಫಲನವೆಂಬುದನ್ನು ಅವರು ಸ್ಪಷ್ಟಪಡಿಸಿದರು.

ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿತು. ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಎಂ.ಎಚ್. ಸವದತ್ತಿ, ಎಂ.ಎ. ಯರಗುಡಿ, ಶಾಮ್ ಲಾಂಡೆ, ಬಸವರಾಜ, ಸದಾನಂದ, ಸಾಗರ ಅಣ್ಣಿಗೇರಿ ಹಾಗೂ ಆಶ್ರಮದ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಉಪಸ್ಥಿತರಿದ್ದರು.

# ಮಕ್ಕಳು ಸಂಕಲ್ಪ ಸಿದ್ಧಿಗಾಗಿ ನಿರಂತರ ಪ್ರಯತ್ನಿಸಬೇಕು

## ಸಂಸ್ಕೃತಿ-ಸಂಸ್ಕಾರ ಶಿಬಿರದಲ್ಲಿ ವಿಶೇಷ ಉಪನ್ಯಾಸ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳು ತಮ್ಮಲ್ಲಿರುವ ಪ್ರತಿಭೆ, ಶಕ್ತಿ ಹಾಗೂ ಸಾಮರ್ಥ್ಯವನ್ನು ಅರಿತುಕೊಂಡು ಗುರಿ-ಸಂಕಲ್ಪಗಳನ್ನು ರೂಪಿಸಿಕೊಂಡು ಅವುಗಳನ್ನು ಸಾಧಿಸಲು ನಿರಂತರ ಪ್ರಯತ್ನಿಸಬೇಕು ಎಂದು ಖ್ಯಾತ ಸಾಹಿತಿ ಡಾ. ನಿಂಗು ಸೊಲಗಿ ಹೇಳಿದರು.

ಎಸ್.ವೈ.ಬಿ.ಎಂ.ಎಸ್. ಯೋಗ ಪಾಠಶಾಲೆ ಗದಗ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2026 ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಯುತ್ತಿರುವ 21ನೇ ಸಂಸ್ಕೃತಿ-ಸಂಸ್ಕಾರ ಶಿಬಿರದಲ್ಲಿ 'ನಿನ್ನೊಳಗೇನಿದೆ' ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಸಾಮಾನ್ಯವಾಗಿ ಮಕ್ಕಳನ್ನು "ಮುಂದೆ ಏನಾಗಬೇಕು?" ಎಂದು ಕೇಳಿದರೆ ವೈದ್ಯ, ಇಂಜಿನಿಯರ್, ಸೈನಿಕ, ವಿಜ್ಞಾನಿ ಮುಂತಾದ ಉತ್ತರಗಳನ್ನು ನೀಡುತ್ತಾರೆ. ಆದರೆ ಮುಂದಿನ ದಿನಗಳಲ್ಲಿ ಅದನ್ನು ಮರೆತು ಬೇರೆ ದಾರಿಗೆ ಸಾಗುತ್ತಾರೆ. ಇದಕ್ಕಿಂತ ಮಕ್ಕಳು ತಮ್ಮೊಳಗಿನ ಸಾಮರ್ಥ್ಯವನ್ನು ಗುರುತಿಸಿಕೊಂಡು ಅದಕ್ಕೆ ತಕ್ಕ ಸಂಕಲ್ಪ ಮಾಡಿಕೊಂಡು ಅದನ್ನು ಸಾಧಿಸಲು ಶ್ರಮಿಸಬೇಕು ಎಂದು ತಿಳಿಸಿದರು.

> ಶಿಬಿರಾರ್ಥಿಗಳೊಂದಿಗೆ ಪ್ರಶ್ನೋತ್ತರ ಸಂವಾದ ನಡೆಸಿದ ನಿಂಗು ಸೊಲಗಿ ಅವರು, ಅವರ ಸಂದೇಹಗಳಿಗೆ ಉತ್ತರ ನೀಡಿದರು. "ಮಕ್ಕಳೆ, ನೀವು ಯಾವ ಕ್ಷೇತ್ರದಲ್ಲೇ ಸಾಧನೆ ಮಾಡಿದರೂ ಉತ್ತಮ ವ್ಯಕ್ತಿಗಳಾಗಿ, ಸಮಾಜ ಸೇವಕರಾಗಿ ಬೆಳೆದರೆ ನಾಡಿನ ಘನತೆ ಹೆಚ್ಚುತ್ತದೆ" ಎಂದು ಸಲಹೆ ನೀಡಿದರು.

ಮಕ್ಕಳು ತಮ್ಮ ಶಕ್ತಿ, ಬುದ್ಧಿಮಟ್ಟ ಮತ್ತು ಜ್ಞಾನವನ್ನು ಕಡಿಮೆ ಅಂದಾಜು ಮಾಡಬಾರದು. ಎಲ್ಲ ಮಕ್ಕಳಲ್ಲಿಯೂ ಅಪಾರ ಸಾಮರ್ಥ್ಯ ಅಡಗಿದೆ. ಅದನ್ನು ಬಳಸಿದಷ್ಟು ಅದು ಬೆಳೆಯುತ್ತದೆ, ಬಳಸದೇ ಇದ್ದರೆ ಕುಂಠಿತವಾಗುತ್ತದೆ. ಪಾಲಕರು ಮತ್ತು ಶಿಕ್ಷಕರು ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಉತ್ತೇಜಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿಬಿರ ಸಂಯೋಜಕ ಕೆ.ಎಸ್. ಪಳ್ಳೇದ ಹಾಗೂ ಸಂಗೀತ ಶಿಕ್ಷಕಿ ಸುನಂದಾ ಜ್ಞಾನೋಪಂತ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಶಿಬಿರಾರ್ಥಿಗಳ ಹಾಗೂ ಸಂಘಟಕರ ಪರವಾಗಿ ಡಾ. ನಿಂಗು ಸೊಲಗಿಯವರನ್ನು ಗೌರವಿಸಲಾಯಿತು.

ಆರಂಭದಲ್ಲಿ ಶ್ರದ್ಧಾ ನಿರಂಜನ, ಶ್ರಾವಣಿ ಬೀರನೂರ ಹಾಗೂ ತಂಡ ಪ್ರಾರ್ಥನೆ ಸಲ್ಲಿಸಿದರು. ನಿಧಿ ಕಟ್ಟಿಮನಿ ಗಣ್ಯರನ್ನು ಪರಿಚಯಿಸಿ ಸ್ವಾಗತಿಸಿದರು. ಆದಿಶೇಷ ನಾಗೇಶ್ ಕಾರ್ಯಕ್ರಮ ನಿರೂಪಿಸಿದರು.

## ಸೋಮೇಶ್ವರ ಜಾತ್ರೆ: ರಥಕ್ಕೆ ವಿಶೇಷ ಪೂಜೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀ ಸೋಮೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಸಂಪ್ರದಾಯದಂತೆ ರಥಕ್ಕೆ ವಿಶೇಷ ಪೂಜೆ ಸಲ್ಲಿಸಿ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ಪ್ರತಿ ವರ್ಷದಂತೆ ಈ ಬಾರಿಯೂ ನೂರಾರು ಮುತ್ತೈದೆಯರು ರಥಕ್ಕೆ ಪೂಜೆ ಸಲ್ಲಿಸಿ ಉಡಿ ತುಂಬುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂಪ್ರದಾಯವನ್ನು ಶ್ರದ್ಧೆಯಿಂದ ಆಚರಿಸಿದರು. ಪೂಜಾ ವಿಧಿವಿಧಾನಗಳನ್ನು ಶಿವಲಿಂಗಯ್ಯ ಹಾಲೇವಾಡಿಮಠ ನೆರವೇರಿಸಿದರು.

ಪುರಸಭೆ ಮಾಜಿ ಅಧ್ಯಕ್ಷೆ ಅಶ್ವಿನಿ ಅಂಕಲಕೋಟಿ ಸೇರಿದಂತೆ ಶೋಭಾ ಮೆಣಸಿನಕಾಯಿ, ಇಂದುಮತಿ ಜಕ್ಕನಗೌಡ್ರ, ಶ್ರೀದೇವಿ ಮಹಾಂತಶೆಟ್ಟರ, ನಂದಾ ಮೆಕ್ಕಿ, ಅನಿತಾ ಗಡ್ಡಿ, ಸುಶೀಲಾ ಮಲ್ಲಾಡದ, ವಿದ್ಯಾ ಬಳ್ಳೊಳ್ಳಿ, ಗಿರಿಜಾ ಮುಳಗುಂದ, ನೀಲಾ ಪಾಟೀಲ, ಜ್ಯೋತಿ ಚೌಕನವರ, ಶಿಲ್ಪಾ ಕೋಟೇಪ್ಪನವರ, ಇಂದ್ರಾ ಪಾಟೀಲ, ಗಿರಿಜಾ ಧರ್ಮಂತರ, ರಾಜೇಶ್ವರಿ ಮತ್ತೂರ, ಮುತ್ತಕ್ಕ ಜಾವುರ, ನಂದಾ ಕಟ್ಟಿಗೌಡ್ರ, ದೀಪಾ ಸುತಾರ, ಸುಧಾ ಅಕ್ಕಿ ಸೇರಿದಂತೆ ಅನೇಕ ಮಹಿಳೆಯರು ಉಡಿ ತುಂಬುವ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

ಜಾತ್ರೆಯ ಅಂಗವಾಗಿ ನಡೆದ ಈ ಧಾರ್ಮಿಕ ಕಾರ್ಯಕ್ರಮವು ಭಕ್ತರ ಆಧ್ಯಾತ್ಮಿಕ ಭಾವನೆಗೆ ಉತ್ತೇಜನ ನೀಡಿದಂತೆ, ಸ್ಥಳೀಯ ಸಂಸ್ಕೃತಿ ಮತ್ತು ಸಂಪ್ರದಾಯಗಳ ಸಂರಕ್ಷಣೆಗೆ ಸಹ ಕಾರಣವಾಯಿತು.

# TAVI ಹೃದಯ ಶಸ್ತ್ರಚಿಕಿತ್ಸೆ ಯಶಸ್ಸು

### ರಾಜ್ಯದಲ್ಲೇ ಅಪರೂಪದ ಸಾಧನೆಗೈದ ವೈದ್ಯರ ತಂಡಕ್ಕೆ ಸಚಿವ ಎಚ್.ಕೆ. ಪಾಟೀಲ ಅಭಿನಂದನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಹೊಸ ತಂತ್ರಜ್ಞಾನ ಅಳವಡಿಸಿಕೊಂಡು ವೈದ್ಯಕೀಯ ಕ್ಷೇತ್ರದಲ್ಲಿ ಮಾದರಿಯಾಗುತ್ತಿರುವ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಇದೀಗ ಖಿಂಗಿಖ ಹೃದಯ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸುವ ಮೂಲಕ ರಾಜ್ಯದ ಗಮನ ಸೆಳೆದಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸ್ಥೆಯ ಕ್ಯಾಥ್ ಲ್ಯಾಬ್‌ನಲ್ಲಿ ಮೊಟ್ಟಮೊದಲ ಬಾರಿಗೆ TAVI (ಟ್ರಾನ್ಸ್‌ಕ್ಯಾಥೆಟರ್ ಮಹಾಪಧಮನಿಯ ವಾಲ್ವ್ ಇಂಪ್ಲಾಂಟೇಶನ್) ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿಸಲಾಗಿದೆ. ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಹೊರತುಪಡಿಸಿ ಈ ಸಾಧನೆ ಮಾಡಿದ ಮೊದಲ ಜಿಲ್ಲೆ ಎಂಬ ಹೆಗ್ಗಳಿಕೆಗೆ ಗದಗ ಪಾತ್ರವಾಗಿದೆ ಎಂದರು.



> "ಗದಗದಲ್ಲಿ ಕ್ಯಾಥ್ ಲ್ಯಾಬ್ ಆರಂಭವಾದ ಬಳಿಕ ವರ್ಷದಲ್ಲೇ 543ಕ್ಕೂ ಹೆಚ್ಚು ಹೃದಯ ಚಿಕಿತ್ಸೆಗಳು ನಡೆದಿವೆ; ಆಧುನಿಕ ತಂತ್ರಜ್ಞಾನ ಜನಸಾಮಾನ್ಯರಿಗೆ ತಲುಪಬೇಕು."
> **– ಎಚ್.ಕೆ. ಪಾಟೀಲ,** ಜಿಲ್ಲಾ ಉಸ್ತುವಾರಿ ಸಚಿವ,

> "ಖಾಸಗಿ ಆಸ್ಪತ್ರೆಗಳಲ್ಲಿ 25 ಲಕ್ಷ ರೂ. ವರೆಗೆ ವೆಚ್ಚವಾಗುವ TAVI ಶಸ್ತ್ರಚಿಕಿತ್ಸೆಯನ್ನು ಇಲ್ಲಿ ಉಚಿತವಾಗಿ ಮಾಡಲಾಗಿದೆ; 24 ಗಂಟೆಯೊಳಗೆ ರೋಗಿಯನ್ನು ಡಿಸ್ಚಾರ್ಜ್ ಮಾಡಲಾಗಿದೆ."
> **– ಡಾ. ವಿಕ್ರಂ ಪಾಟೀಲ,** ವೈದ್ಯರು.

ಖಾಸಗಿ ಆಸ್ಪತ್ರೆಗಳಲ್ಲಿ 22–25 ಲಕ್ಷ ರೂ. ವೆಚ್ಚವಾಗುವ ಈ ಶಸ್ತ್ರಚಿಕಿತ್ಸೆಯನ್ನು ನರಗುಂದ ತಾಲೂಕಿನ 68 ವರ್ಷದ ರಮೇಶ್ ಮುರಡಿ ಅವರಿಗೆ ಎಸ್ಸಿಪಿ–ಟಿಎಸ್ಪಿ ಅನುದಾನದಡಿ ಉಚಿತವಾಗಿ ನೆರವೇರಿಸಲಾಗಿದೆ ಎಂದು ತಿಳಿಸಿದರು.

ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಮಾರ್ಗದರ್ಶನದಲ್ಲಿ, ಹೃದ್ರೋಗ ತಜ್ಞ ಡಾ. ಸಂಜೀವ್ ಚಿಂತಾಮಣಿ ಸಹಕಾರದಲ್ಲಿ, ಬೆಂಗಳೂರಿನ TAVI ತಜ್ಞ ಡಾ. ವಿಕ್ರಂ ಪಾಟೀಲ ನೇತೃತ್ವದ ತಂಡ ಸಂಕೀರ್ಣ 'ಹೈಬ್ರಿಡ್ TAVI' ವಿಧಾನದಿಂದ ಶಸ್ತ್ರಚಿಕಿತ್ಸೆ ನೆರವೇರಿಸಿದೆ.

ಕ್ಯಾಥ್ ಲ್ಯಾಬ್ ಪ್ರಾರಂಭವಾದ ವರ್ಷದಲ್ಲೇ 543ಕ್ಕೂ ಹೆಚ್ಚು ಹೃದಯ ಚಿಕಿತ್ಸೆಗಳು ನೆರವೇರಿಸಲಾಗಿದ್ದು, ಇದರಲ್ಲಿ 272ಕ್ಕೂ ಹೆಚ್ಚು ಆಂಜಿಯೋಪ್ಲಾಸ್ಟಿ, 494ಕ್ಕೂ ಹೆಚ್ಚು ಆಂಜಿಯೋಗ್ರಾಫಿ, 13 ಪೇಸ್‌ಮೇಕರ್ ಅಳವಡಿಕೆ ಸೇರಿದಂತೆ ಹಲವು ಚಿಕಿತ್ಸೆಗಳನ್ನು ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ಹೃದ್ರೋಗ ತಜ್ಞ ಡಾ. ವಿಕ್ರಂ ಪಾಟೀಲ ಮಾತನಾಡಿ, ಖಿಂಗಿಖ ವಿಧಾನವು ತೆರೆದ ಹೃದಯ ಶಸ್ತ್ರಚಿಕಿತ್ಸೆ ಇಲ್ಲದೆ ತೊಡೆಯ ಸಂದಿನ ಮೂಲಕ ಕ್ಯಾಥೆಟರ್ ಬಳಸಿ ಹೃದಯದ ಕವಾಟ ಬದಲಾಯಿಸುವ ಅತ್ಯಾಧುನಿಕ ವಿಧಾನವಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಡಾ. ವಿನಾಯಕ, ಬಿ.ಬಿ. ಅಸೂಟಿ, ಅಶೋಕ ಮಂದಾಲಿ, ಸಿದ್ದು ಪಾಟೀಲ ಹಾಗೂ ಆಡಳಿತಾಧಿಕಾರಿ ಡಾ. ದುರುಗೇಶ್ ಕೆ.ಆರ್. ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಭಕ್ತರಿಗೆ ಉಚಿತ ಪ್ರಸಾದ: ಹಲಗೇರಿ ಯುವಕರ ಮಾದರಿ ಸೇವೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ರಾಣೆಬೆನ್ನೂರು ತಾಲೂಕಿನ ಹಲಗೇರಿ ಗ್ರಾಮದ ಯುವಕರ ತಂಡವು ಪಾದಯಾತ್ರೆಯ ಮೂಲಕ ಆಗಮಿಸಿ, ಎರಡು ದಿನಗಳ ಕಾಲ ಸಾವಿರಾರು ಭಕ್ತರಿಗೆ ತಮ್ಮದೇ ಖರ್ಚಿನಲ್ಲಿ ಉಚಿತ ಪ್ರಸಾದ ವ್ಯವಸ್ಥೆ ಮಾಡಿ ಮಾದರಿಯಾಗಿದ್ದಾರೆ.

ಅರುಣ ಕಡೂರ, ಪ್ರಶಾಂತ ಕಡೂರ, ಪ್ರವೀಣ ಕಡೂರ, ಶಿವನಗೌಡ್ರ, ಸೋಮನಗೌಡ್ರ, ಭರತ್, ಕಾಂತೇಶ, ಶರತ್, ಸುನೀಲ, ವಿಶ್ವ, ಬಸಲಿಂಗಪ್ಪ, ಬಸವರಾಜ, ರಘು, ಸೋಮಣ್ಣ, ಪ್ರಶಾಂತ, ಬಸವರಾಜ ಯು., ಕಿರಣ ಸೇರಿದಂತೆ ಅನೇಕ ಯುವಕರು ಈ ತಂಡದಲ್ಲಿ ಸೇರಿದ್ದು, ಪ್ರತಿವರ್ಷದಂತೆ ಈ ಬಾರಿಯೂ ಪಾದಯಾತ್ರೆಯ ಮೂಲಕ ಆಗಮಿಸಿ ಸೇವಾ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ.

"ನಮ್ಮ ಮನೆ ದೇವರು ಶ್ರೀ ಸೋಮೇಶ್ವರನ ಸನ್ನಿಧಿಗೆ ಪಾದಯಾತ್ರೆಯ ಮೂಲಕ ಬರುವುದು ನಮ್ಮ ಸಂಪ್ರದಾಯ. ಹಲಗೇರಿಯಿಂದ ಬರಿಗಾಲಿನಲ್ಲಿ ಎರಡು ದಿನಗಳ ಮುಂಚಿತವಾಗಿ ಹೊರಟು ಜಾತ್ರೆ ವೇಳೆಗೆ ಇಲ್ಲಿಗೆ ತಲುಪುತ್ತೇವೆ. ದೇವರ ಸೇವೆ ಮಾಡುವ ಅವಕಾಶ ದೊರಕಿರುವುದು ನಮಗೆ ಪುಣ್ಯ," ಎಂದು ತಂಡದ ಮುಖಂಡ ಹಾಗೂ ಹಲಗೇರಿ ಗ್ರಾಮ ಪಂಚಾಯಿತಿ ಸದಸ್ಯ ಪ್ರವೀಣ ಕಡೂರ ತಿಳಿಸಿದ್ದಾರೆ.

ಯುವಕರ ಸೇವಾ ಮನೋಭಾವವನ್ನು ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮೀಟಿ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ ಶ್ಲಾಘಿಸಿದ್ದಾರೆ.

# ದೇಶದ ಅಭಿವೃದ್ಧಿಯಲ್ಲಿ ಇಂಜಿನಿಯರ್‌ಗಳ ಪಾತ್ರ ಮಹತ್ವದ್ದು

### ಪದವಿ ಪ್ರಧಾನ ಸಮಾರಂಭದಲ್ಲಿ ಯುವಕರಿಗೆ ಸುರೇಶ ಕುಲಕರ್ಣಿ ಸಂದೇಶ




> "ಹೊಸ ಸಂಶೋಧನೆಗಳು ಮತ್ತು ಆವಿಷ್ಕಾರಗಳು ರಾಷ್ಟ್ರದ ವಿಕಾಸಕ್ಕೆ ಪೂರಕವಾಗಬೇಕು; ಇಂಜಿನಿಯರ್‌ಗಳೇ ದೇಶದ ಭವಿಷ್ಯದ ನಿರ್ಮಾತೃಗಳು."
> **– ಸುರೇಶ ಕುಲಕರ್ಣಿ.**

* 350 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ
* ತಾಂತ್ರಿಕ ಶಿಕ್ಷಣಕ್ಕೆ ಹೆಚ್ಚುತ್ತಿರುವ ಅವಕಾಶಗಳು
* ಗ್ರಾಮೀಣ ವಿದ್ಯಾರ್ಥಿಗಳಿಗೆ ಶಿಕ್ಷಣದ ಮಹತ್ವ ಒತ್ತಿ ಹೇಳಿಕೆ
* ಸಂಸ್ಕಾರ ಹಾಗೂ ಮೌಲ್ಯಗಳೊಂದಿಗೆ ಶಿಕ್ಷಣದ ಅಗತ್ಯ

**ಸಂಭ್ರಮದ ಕ್ಷಣಗಳು**

ಕಾಲೇಜು ಆವರಣದಲ್ಲಿ ವಿವಿಧ ವಿಭಾಗಗಳ ಪದವೀಧರರು ಭಾವುಟಗಳೊಂದಿಗೆ ಸಂಭ್ರಮಿಸಿದರು. ಸ್ನೇಹಿತರು ಮತ್ತು ಪಾಲಕರೊಂದಿಗೆ ಸೆಲ್ಫಿ ತೆಗೆದುಕೊಂಡು ಸಂತಸ ಹಂಚಿಕೊಂಡರು.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇಶದ ಸಮಗ್ರ ಅಭಿವೃದ್ಧಿಯಲ್ಲಿ ಇಂಜಿನಿಯರ್‌ಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಸಾಹಿತಿ ಹಾಗೂ ಶಿಕ್ಷಣ ಚಿಂತಕ ಸುರೇಶ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಇಂಜಿನಿಯರಿಂಗ್ ಕಾಲೇಜುನಲ್ಲಿ 2026ನೇ ಸಾಲಿನಲ್ಲಿ ವಿವಿಧ ವಿಭಾಗಗಳಲ್ಲಿ ಪದವಿ ಪೂರ್ಣಗೊಳಿಸಿದ 350 ವಿದ್ಯಾರ್ಥಿಗಳ ಪದವಿ ಪ್ರಧಾನ ಸಮಾರಂಭದಲ್ಲಿ ಮಾತನಾಡಿದ ಅವರು, ಇಂಜಿನಿಯರಿಂಗ್ ಪದವಿ ಉಜ್ವಲ ಭವಿಷ್ಯದ ಮೈಲುಗಲ್ಲಾಗಿದೆ ಎಂದರು.


ವಿದ್ಯಾರ್ಥಿಗಳು ಸತತ ಅಭ್ಯಾಸ, ಪರಿಶ್ರಮ ಮತ್ತು ಕೌಶಲ್ಯದಿಂದ ರಾಷ್ಟ್ರದ ಅಭಿವೃದ್ಧಿಗೆ ಪೂರಕವಾಗುವಂತಹ ಆವಿಷ್ಕಾರಗಳನ್ನು ಮಾಡಬೇಕು ಎಂದು ಸಲಹೆ ನೀಡಿದರು.


ಪಾಲಕರು ಮಕ್ಕಳ ಯಶಸ್ಸಿಗಾಗಿ ತ್ಯಾಗ ಮಾಡುತ್ತಾರೆ. ಅವರ ಕನಸುಗಳನ್ನು ನನಸಾಗಿಸುವುದು ವಿದ್ಯಾರ್ಥಿಗಳ ಕರ್ತವ್ಯ. ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಪರಶುರಾಮ ಬಾರ್ಕಿ ಮಾತನಾಡಿ, ಯುವ ಇಂಜಿನಿಯರ್‌ಗಳು ದೇಶದ ವಿವಿಧ ಕ್ಷೇತ್ರಗಳಲ್ಲಿ ಶ್ರೇಷ್ಠ ಕೊಡುಗೆ ನೀಡಬೇಕು ಎಂದರು.

## ಸರಕಾರಿ ಬಾಲಕಿಯರ ಪ್ರೌಢಶಾಲೆ ಶೇ. 98.6 ಫಲಿತಾಂಶ







**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇಲ್ಲಿನ ಸರಕಾರಿ ಬಾಲಕಿಯರ ಪ್ರೌಢಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶ ಶೇ. 98.6 ರಷ್ಟು ದಾಖಲಾಗಿದೆ.

ಪರೀಕ್ಷೆಗೆ ಹಾಜರಾದ ಒಟ್ಟು 72 ವಿದ್ಯಾರ್ಥಿನಿಯರಲ್ಲಿ 71 ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದಾರೆ. ಹೇಮಲತಾ ಕುಲಕರ್ಣಿ ಹಾಗೂ ಪ್ರೇಮಾ ಬಾರಿಕಾಯಿ ತಲಾ 585 ಅಂಕಗಳು (ಶೇ. 93.60) ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ವೈಷ್ಣವಿ ನೇಲಗುಡ್ಡದ ಹಾಗೂ ಲಕ್ಷ್ಮಿ ಅಬ್ಬಿಗೇರಿ ತಲಾ 568 ಅಂಕಗಳು (ಶೇ. 90.88) ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ. ಪೂರ್ಣಿಮಾ ಹನವಾಳ 562 ಅಂಕಗಳು (ಶೇ. 89.92) ಪಡೆದು ತೃತೀಯ ಸ್ಥಾನ ಪಡೆದಿದ್ದಾಳೆ.

ಪ್ರೇಮಾ ಬಾರಿಕಾಯಿ ಮತ್ತು ಹೇಮಲತಾ ಕುಲಕರ್ಣಿ ಗಣಿತ, ವಿಜ್ಞಾನ ಹಾಗೂ ಸಮಾಜ ವಿಜ್ಞಾನ ವಿಷಯಗಳಲ್ಲಿ ಶೇ. 100 ಅಂಕಗಳನ್ನು ಗಳಿಸಿರುವುದು ಈ ಸಾಲಿನ ವಿಶೇಷವಾಗಿದೆ.

ಕಳೆದ ವರ್ಷ ಶೇ. 64 ರಷ್ಟಿದ್ದ ಫಲಿತಾಂಶ, ಈ ವರ್ಷ ಶೇ. 34 ರಷ್ಟು ಏರಿಕೆಯಾಗಿರುವುದು ಗಮನಾರ್ಹ ಸಾಧನೆಯಾಗಿದೆ. ಈ ಸಾಧನೆಗೆ ಶಾಲೆಯ ಎಲ್ಲಾ ಶಿಕ್ಷಕರನ್ನು ಎಸ್.ಡಿ.ಎಂ.ಸಿ ಅಭಿನಂದಿಸಿದೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕೆವಿಎಸ್‌ಆರ್ ಪ್ರೌಢಶಾಲೆ ಉತ್ತಮ ಸಾಧನೆ





**■ವಿಜಯಸಾಕ್ಷಿ ಸುದ್ದಿ, ಗದಗ**

ಕನಕದಾಸ ಶಿಕ್ಷಣ ಸಂಸ್ಥೆಯ ಅಂಗ ಸಂಸ್ಥೆಯಾದ ತಿಮ್ಮಾಪೂರದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಈ ವರ್ಷ ಶಾಲೆಯ ಫಲಿತಾಂಶ ಶೇ. 98 ರಷ್ಟು ದಾಖಲಾಗಿದ್ದು, ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಿದ್ದಾರೆ. ಶ್ವೇತಾ ತಳವಾರ ಪ್ರಥಮ ಸ್ಥಾನ, ಗಾಯತ್ರಿ ಬಳಿಗಾರ ದ್ವಿತೀಯ ಸ್ಥಾನ ಹಾಗೂ ಮಂಜುನಾಥ ಕುರಡಗಿ ತೃತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ಕನಕದಾಸ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಡಾ. ಬಿ.ಎಫ್. ದಂಡಿನ, ಚೇರ್ಮನ್ ರವೀಂದ್ರನಾಥ ದಂಡಿನ, ಗೌರವ ಕಾರ್ಯದರ್ಶಿ ಶೀಲಾ ಆರ್. ದಂಡಿನ, ಸಂಕೇತಕುಮಾರ ದಂಡಿನ, ಶಾಲೆಯ ಮುಖ್ಯಸ್ಥ ರಾಮಣ್ಣ ಕುರಡಗಿ, ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಸೇರಿದಂತೆ ಶಿಕ್ಷಕ ವೃಂದ ಮತ್ತು ಗ್ರಾಮದ ಹಿರಿಯರು ಅಭಿನಂದನೆ ಸಲ್ಲಿಸಿದ್ದಾರೆ.

# ಸಹಸ್ರನಾಮ ಪಠಣದಿಂದ ಮಾನಸಿಕ ಆರೋಗ್ಯ ಸ್ಥಿರ

### ಮನಸ್ಸಿಗೆ ಶಾಂತಿ, ಜೀವನಕ್ಕೆ ಸಮತೋಲನ: ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು




> "ಸಹಸ್ರನಾಮ ಪಠಣ ಮನಸ್ಸಿಗೆ ಶಾಂತಿ ನೀಡುತ್ತದೆ; ಮಾನಸಿಕ ಆರೋಗ್ಯಕ್ಕೆ ಇದು ಉತ್ತಮ ಮಾರ್ಗ."
> **– ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು.**

**■ವಿಜಯಸಾಕ್ಷಿ ಸುದ್ದಿ, ಗದಗ**

ಸಹಸ್ರನಾಮ ಪಠಣವು ಮನಸ್ಸಿನ ಸ್ಥೈರ್ಯಕ್ಕೆ ಕಾರಣವಾಗುತ್ತಿದ್ದು, ಮಾನಸಿಕ ಆರೋಗ್ಯವನ್ನು ಸಮತೋಲನದಲ್ಲಿರಿಸಲು ಸಹಕಾರಿ ಎಂದು ಅದಮಾರು ಮಠದ ಹಿರಿಯ ಶ್ರೀಗಳಾದ ಶ್ರೀ ವಿಶ್ವಪ್ರಿಯತೀರ್ಥ ಶ್ರೀಪಾದಂಗಳವರು ತಿಳಿಸಿದರು.

ನಗರದ ಐತಿಹಾಸಿಕ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ನಡೆದ ಮೂರು ದಿನಗಳ ಧಾರ್ಮಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಮಾಯಣದ ಪ್ರಸಂಗವನ್ನು ಉಲ್ಲೇಖಿಸಿ ಶ್ರೀರಾಮಚಂದ್ರರ ಜೀವನ ಸಂದೇಶಗಳನ್ನು ವಿವರಿಸಿದರು.

ಸಮಾಜದ ಒಳಿತಿಗಾಗಿ ಭಗವಂತ ತನ್ನವರನ್ನೇ ಬಲಿ ನೀಡುತ್ತಾನೆ ಎಂಬುದಕ್ಕೆ ಪುರಾಣಗಳಲ್ಲಿ ಸಾಕ್ಷಿಗಳಿವೆ. ಸಹಸ್ರನಾಮದಲ್ಲಿ 72 ಸಾವಿರ ಅಕ್ಷರಗಳಿದ್ದು, ಅದರ ಪಠಣ ಮನಸ್ಸಿಗೆ ಶಾಂತಿ ಹಾಗೂ ಸ್ಥಿರತೆ ನೀಡುತ್ತದೆ ಎಂದು ಹೇಳಿದರು.

ಪ್ರಸ್ತುತ ಶೈಕ್ಷಣಿಕ ವ್ಯವಸ್ಥೆಯ ಕುರಿತು ಹಾಸ್ಯಮಿಶ್ರಿತವಾಗಿ ಮಾತನಾಡಿದ ಅವರು, ಶಿಕ್ಷಕರ ಪಾತ್ರ ಮತ್ತು ವಿದ್ಯಾರ್ಥಿಗಳ ಅನುಭವಗಳನ್ನು ಉದಾಹರಣೆಯಾಗಿ ವಿವರಿಸಿ ಗಮನ ಸೆಳೆದರು.

ಮೂರು ದಿನಗಳ ಕಾರ್ಯಕ್ರಮದ ಸಮಾರೋಪದಲ್ಲಿ ಫಲಮಂತ್ರಾಕ್ಷತೆ ವಿತರಿಸಿ ಭಕ್ತರನ್ನು ಆಶೀರ್ವದಿಸಿದರು.

ಈ ಸಂದರ್ಭದಲ್ಲಿ ಪಂ. ವರದಾಚಾರ್ಯ ಜಾಲಿಹಾಳ, ರಾಘಣ್ಣ ಜೋಶಿ, ಶ್ರೀಧರಾಚಾರ್ಯ ಶಿರಹಟ್ಟಿ, ಶ್ರೀಕಾಂತಾಚಾರ್ಯ ನಿಲೂಗಲ್ಲ ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.

# ವಿಜೃಂಭಣೆಯಿಂದ ನೆರವೇರಿದ ಶ್ರೀ ಸೋಮೇಶ್ವರ ಮಹಾರಥೋತ್ಸವ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಆರಾಧ್ಯದೈವ ಪುಲಿಗೆರೆಯ ಶ್ರೀ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವದ ಅಂಗವಾಗಿ ಗೋಧೂಳಿ ವೇಳೆಯಲ್ಲಿ ಅಪಾರ ಭಕ್ತಸಮೂಹದ ನಡುವೆ ಶ್ರೀ ಸೋಮೇಶ್ವರ ಮಹಾರಥೋತ್ಸವ ಅದ್ದೂರಿಯಾಗಿ ನೆರವೇರಿತು.

ಜಾತ್ರೆಯ ಅಂಗವಾಗಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಅಲಂಕಾರ ಮಾಡಲಾಗಿತ್ತು. ಬೆಳಿಗ್ಗೆಯಿಂದಲೇ ಮಹಿಳೆಯರು, ಮಕ್ಕಳು ಹೊಸ ಉಡುಗೆ ಧರಿಸಿ ದೇವಸ್ಥಾನಕ್ಕೆ ಆಗಮಿಸಿ ಶಿವ ಪಾರ್ವತಿ ಸಮೇತ ನಂದಿಯ ಮೇಲೆ ವಿರಾಜಮಾನನಾದ ದೇವರನ್ನು ಭಕ್ತಿಪೂರ್ವಕವಾಗಿ ನಮಿಸಿದರು. ಚಿನ್ನದ ಕಿರೀಟ ಹಾಗೂ ಆಭರಣಗಳಿಂದ ಅಲಂಕೃತಗೊಂಡ ದೇವರನ್ನು ಭಕ್ತರು ಸರದಿ ಸಾಲಿನಲ್ಲಿ ನಿಂತು ಕಣ್ತುಂಬಿಕೊಂಡರು.

ಹಣ್ಣು-ಕಾಯಿ ನೈವೇದ್ಯ ಸಲ್ಲಿಸಿ ಬಳಿಕ ರಥಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನು ಅರ್ಪಿಸಿ ಪೂಜೆ ಸಲ್ಲಿಸಿದ ದೃಶ್ಯ ಗಮನಸೆಳೆಯಿತು.

ಸಂಜೆ ಪಲ್ಲಕ್ಕಿ ಉತ್ಸವದೊಂದಿಗೆ ಮಹಾರಥೋತ್ಸವ ಆರಂಭಗೊಂಡಿತು. ನಾಡಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು "ಹರ ಹರ ಮಹಾದೇವ", "ಶ್ರೀ ಸೋಮೇಶ್ವರ ಮಹಾರಾಜ ಕೀ ಜೈ" ಘೋಷಣೆಗಳನ್ನು ಕೂಗುತ್ತ ಭಕ್ತಿ ಭಾವದಲ್ಲಿ ತೇಲಿದರು. ಭಕ್ತರು ರಥದತ್ತ ಉತ್ತತ್ತಿ ಹಾಗೂ ಹಣ್ಣುಗಳನ್ನು ಎಸೆದು ಭಕ್ತಿ ಪ್ರದರ್ಶಿಸಿದರು. ಯುವಕರು ತೇರಿನ ಕಳಸಕ್ಕೆ ಗುರಿಯಿಟ್ಟು ಹಣ್ಣುಗಳನ್ನು ಎಸೆಯುತ್ತಿದ್ದ ದೃಶ್ಯ ವಿಶೇಷವಾಗಿತ್ತು. ನವದಂಪತಿಗಳು ರಥದ ಕಳಸವನ್ನು ನೋಡುವುದಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರು.



ಮಹಾರಥೋತ್ಸವದ ವ್ಯವಸ್ಥೆಯನ್ನು ಜಾತ್ರಾ ಸಮಿತಿ, ಸೇವಾ ಸಮಿತಿಯ ಸದಸ್ಯರು ಹಾಗೂ ಅರ್ಚಕರು ಸಮರ್ಪಕವಾಗಿ ನಿರ್ವಹಿಸಿದರು. ಭಕ್ತರ ಸುರಕ್ಷತೆಗಾಗಿ ಪೊಲೀಸರು ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು. ರಥೋತ್ಸವಕ್ಕೂ ಮೊದಲು ಸುರಿದ ತುಂತುರು ಮಳೆಯು ಬಿಸಿಲಿನ ತಾಪ ಕಡಿಮೆ ಮಾಡಿ ಭಕ್ತರಿಗೆ ಅನುಕೂಲಕರ ವಾತಾವರಣ ಕಲ್ಪಿಸಿತು.

ರಥೋತ್ಸವದ ಬಳಿಕ ಭಕ್ತರು ಮಂಡಕ್ಕಿ ಹಾಗೂ ಖಾರಾ ಮಿರ್ಚಿ ಸವಿದು ಸಂಭ್ರಮಿಸಿದರು.

## ಅದ್ದೂರಿಯಾಗಿ ಜರುಗಿದ ಕುಂಭ ಮೆರವಣಿಗೆ



■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ ಹಾಗೂ ಜಗದಂಬಾ ಮಹಿಳಾ ಮಂಡಳದ ಸಂಯುಕ್ತ ಆಶ್ರಯದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ವೈಶಾಖ ಶುದ್ಧ ದ್ವಾದಶಿ ಅಂಗವಾಗಿ ಅಂಬಾಭವಾನಿ ದೇವಿಯ 111ನೇ ಪ್ರಾಣ ಪ್ರತಿಷ್ಠಾಪನಾ ವಾರ್ಷಿಕೋತ್ಸವವನ್ನು ಭಕ್ತಿ ಭಾವದಿಂದ ಆಚರಿಸಲಾಯಿತು.

ಈ ಅಂಗವಾಗಿ 111 ಮುತ್ತೈದೆಯರು 111 ಕುಂಭಗಳನ್ನು ಹೊತ್ತು ಭವ್ಯ ಮೆರವಣಿಗೆಯಲ್ಲಿ ಭಾಗವಹಿಸಿದರು. ಮೆರವಣಿಗೆ ಶ್ರೀ ಅಂಬಾಭವಾನಿ ದೇವಸ್ಥಾನದಿಂದ ಆರಂಭಗೊಂಡು ಟೆಂಗಿನಕಾಯಿ ಬಜಾರ, ಪಿ.ಬಿ.ರೋಡ್, ಕಬಾಡಿ ರಸ್ತೆ ಮಾರ್ಗವಾಗಿ ಸಂಚರಿಸಿ ಮತ್ತೆ ದೇವಸ್ಥಾನಕ್ಕೆ ಮರಳಿ, ದೇವಿಗೆ ವಿಶೇಷ ಪೂಜೆಯೊಂದಿಗೆ ಸಮಾರೋಪಗೊಂಡಿತು.

ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು ಹಾಗೂ ಸಮಾಜಬಾಂಧವರು ಭಕ್ತಿ-ಭಾವದಿಂದ ಭಾಗವಹಿಸಿ ಮೆರವಣಿಗೆಯನ್ನು ಯಶಸ್ವಿಗೊಳಿಸಿದರು. ಬಳಿಕ ಎಲ್ಲರಿಗೂ ಪ್ರಸಾದ ವಿತರಣೆ ಮಾಡಲಾಯಿತು.

**ಲಸಿಕಾ ಕೇಂದ್ರ ಹಾಗೂ ಜಿಲ್ಲಾ ಆರೋಗ್ಯ ಪ್ರಯೋಗಾಲಯ ಉದ್ಘಾಟಿಸಿದ ಸಚಿವ ದಿನೇಶ ಗುಂಡೂರಾವ್**

# ಗುಣಮಟ್ಟದ ಆರೋಗ್ಯ ಸೇವೆಗೆ ಸರ್ಕಾರ ಬದ್ಧ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸಲು ಸರ್ಕಾರವು ಸುಸಜ್ಜಿತ ಆರೋಗ್ಯ ಕೇಂದ್ರಗಳನ್ನು ನಿರ್ಮಿಸುತ್ತಿದ್ದು, ಜನಪರ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್ ಹೇಳಿದರು.

ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ನೂತನ ಲಸಿಕಾ ಕೇಂದ್ರ ಹಾಗೂ ಜಿಲ್ಲಾ ಆಸ್ಪತ್ರೆ ಆವರಣದಲ್ಲಿರುವ ಸಂಯೋಜಿತ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯವನ್ನು ಉದ್ಘಾಟಿಸಿ ಮಾತನಾಡಿದರು.

"ಸಾರ್ವಜನಿಕರಿಗೆ ಅಗತ್ಯವಿರುವ ಔಷಧಿಗಳ ಕೊರತೆ ಉಂಟಾಗದಂತೆ ಕ್ರಮ ಕೈಗೊಂಡಿದ್ದು, ಬೇಡಿಕೆ ಬಂದ ಕೂಡಲೇ ತಕ್ಷಣ ಸರಬರಾಜು ಮಾಡಲಾಗುತ್ತಿದೆ" ಎಂದು ಸಚಿವ ದಿನೇಶ ಗುಂಡೂರಾವ್ ಹೇಳಿದರು.



ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಆರೋಗ್ಯ ಕೇಂದ್ರಗಳಲ್ಲಿ ಔಷಧಿಗಳ ಸಮರ್ಪಕ ದಾಸ್ತಾನು ಇಡಲಾಗಿದ್ದು, ಯಾವುದೇ ಆಸ್ಪತ್ರೆಯಲ್ಲಿ ಕೊರತೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಆರೋಗ್ಯ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವ ಹಿನ್ನೆಲೆಯಲ್ಲಿ ಪಾಳಿಗಳ (ಶಿಫ್ಟ್‌ಗಳ) ಮೂಲಕ ಸೇವೆ ನೀಡುವ ವ್ಯವಸ್ಥೆ ಮಾಡಲಾಗಿದೆ. 225 ತಜ್ಞ ವೈದ್ಯರ ನೇಮಕಾತಿ ಪ್ರಕ್ರಿಯೆ ಆರಂಭಗೊಂಡಿದ್ದು, ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗಿದೆ ಎಂದು ತಿಳಿಸಿದರು. ಪ್ರಧಾನ ಮಂತ್ರಿ ಆಯುಷ್ಮಾನ್ ಭಾರತ್ ಆರೋಗ್ಯ ಮೂಲಸೌಕರ್ಯ ಮಿಷನ್ ಅಡಿಯಲ್ಲಿ ದೇಶಾದ್ಯಂತ ಆರೋಗ್ಯ ಮೂಲಸೌಕರ್ಯ ಅಭಿವೃದ್ಧಿಗೆ ಭಾರೀ ಅನುದಾನ ನೀಡಲಾಗುತ್ತಿದ್ದು, ಕರ್ನಾಟಕ ರಾಜ್ಯಕ್ಕೂ ಸಾವಿರಾರು ಕೋಟಿ ರೂಪಾಯಿ ಮಂಜೂರಾಗಿದೆ ಎಂದು ಅವರು ಹೇಳಿದರು. ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್ ಮಾತನಾಡಿ, ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಉಚಿತ ಹಾಗೂ ಗುಣಮಟ್ಟದ ಚಿಕಿತ್ಸೆ ಮತ್ತು ಔಷಧಿ ದೊರಕುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ಜಿಲ್ಲಾ ಆಸ್ಪತ್ರೆಯಲ್ಲಿ ನೂತನ ವೈದ್ಯಕೀಯ ಸೌಲಭ್ಯಗಳು ಮತ್ತು ಉಪಕರಣಗಳನ್ನು ಒದಗಿಸಲಾಗಿದ್ದು, ವೈದ್ಯರು ಮತ್ತು ಸಿಬ್ಬಂದಿ ನಿಯಮಿತವಾಗಿ ಉತ್ತಮ ಸೇವೆ ನೀಡಲು ಸೂಚಿಸಲಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಅರವಿಂದ ಬೆಲ್ಲದ ವಹಿಸಿದ್ದರು. ಶಾಸಕರಾದ ಎನ್. ಎಚ್. ಕೋನರಡ್ಡಿ, ಎಫ್.ಹೆಚ್. ಜಕ್ಕಪ್ಪನವರ, ಮಹಾಪೌರ ಜ್ಯೋತಿ ಪಾಟೀಲ, ಜಿಲ್ಲಾಧಿಕಾರಿ ಸ್ನೇಹಲ್ ಆರ್., ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

> "ಆರೋಗ್ಯ ಕ್ಷೇತ್ರದಲ್ಲಿ ಹೊಸ ಸೌಲಭ್ಯಗಳು ಮತ್ತು ಮೂಲಸೌಕರ್ಯಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ."
>
> – **ಪ್ರಲ್ಹಾದ ಜೋಶಿ,** ಕೇಂದ್ರ ಸಚಿವ.

> "ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಹಾಗೂ ಉನ್ನತ ದರ್ಜೆಯ ಚಿಕಿತ್ಸೆ ನೀಡುವ ಮೂಲಕ ಸಾರ್ವಜನಿಕರ ವಿಶ್ವಾಸವನ್ನು ಬಲಪಡಿಸಿದ್ದೇವೆ."
>
> – **ಸಚಿವ ಸಂತೋಷ ಎಸ್. ಲಾಡ್,** ಸಚಿವ.

## ಅಕ್ಷತಾ ಭಜಂತ್ರಿಗೆ ರಾಜ್ಯಪಾಲರಿಂದ ಚಿನ್ನದ ಪದಕ




■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯದ 75ನೇ ಘಟಿಕೋತ್ಸವದಲ್ಲಿ ನಗರದ ಅಕ್ಷತಾ ಶಾಂತಕುಮಾರ ಭಜಂತ್ರಿ ಅವರಿಗೆ ಎಂ.ಎಡ್. (ಶಿಕ್ಷಣ) ಪದವಿಯಲ್ಲಿ ಉನ್ನತ ಸ್ಥಾನ ಗಳಿಸಿದ ಹಿನ್ನೆಲೆಯಲ್ಲಿ ಚಿನ್ನದ ಪದಕ ಪ್ರದಾನ ಮಾಡಲಾಯಿತು,

ಕರ್ನಾಟಕ ವಿಶ್ವವಿದ್ಯಾಲಯದ ಗಾಂಧಿ ಭವನದಲ್ಲಿ ಏಪ್ರಿಲ್ 23ರಂದು ನಡೆದ ಘಟಿಕೋತ್ಸವದಲ್ಲಿ ರಾಜ್ಯಪಾಲರು ಹಾಗೂ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಥಾವರಚಂದ್ ಗೆಹ್ಲೋಟ್ ಅವರು ಪದಕ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರು ಹಾಗೂ ಸಮಕುಲಾಧಿಪತಿಗಳಾದ ಡಾ. ಎಂ. ಸಿ. ಸುಧಾಕರ್ ಹಾಗೂ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎ. ಎಂ. ಖಾನ್ ಉಪಸ್ಥಿತರಿದ್ದರು.

ಅಕ್ಷತಾ ಭಜಂತ್ರಿ ಅವರು ಎಂ.ಎಡ್. ಪದವಿಯನ್ನು ರ್‍ಯಾಂಕ್‌ನೊಂದಿಗೆ ಪೂರೈಸಿ, ಪ್ರಸ್ತುತ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಪಿಎಚ್.ಡಿ. ಅಧ್ಯಯನ ನಡೆಸುತ್ತಿದ್ದಾರೆ.

**ಎಸ್‌ಎಸ್‌ಎಲ್‌ಸಿ ಸಾಧಕರಿಗೆ ಸನ್ಮಾನ । ಗದಗ ಗ್ರಾಮೀಣ ವಲಯಕ್ಕೆ ವಿದ್ಯಾರ್ಥಿಗಳ ಕೀರ್ತಿ**

## ಸತತ ಪ್ರಯತ್ನದಿಂದ ಯಶಸ್ಸು ಸಾಧ್ಯ




> "ಸತತ ಪ್ರಯತ್ನ ಮತ್ತು ಪರಿಶ್ರಮದಿಂದ ಯಶಸ್ಸು ಸಾಧಿಸಬಹುದು; ವಿದ್ಯಾರ್ಥಿಗಳು ಇದೇ ದಾರಿಯಲ್ಲಿ ಮುಂದುವರೆಯಬೇಕು."
>
> – **ವಿ.ವಿ. ನಡುವಿನಮನಿ,** ಬಿಇಒ

■ ವಿಜಯಸಾಕ್ಷಿ ಸುದ್ದಿ, ಗದಗ

ಸತತ ಪ್ರಯತ್ನದಿಂದ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ನಗರದ ಬ್ರೈಟ್ ಹಾರಿಝೋನ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ 2025–26ನೇ ಸಾಲಿನ ಉತ್ತಮ ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು. ಗದಗ ಗ್ರಾಮೀಣ ವಲಯದ ಶಾಲೆಗಳು ಉತ್ತಮ ಸಾಧನೆ ಮಾಡಿದ್ದು, ಬ್ರೈಟ್ ಹಾರಿಝೋನ್ ಶಾಲೆಯ 44 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ಎಲ್ಲರೂ ಉತ್ತೀರ್ಣರಾಗಿರುವುದು ಶ್ಲಾಘನೀಯವಾಗಿದೆ ಎಂದರು.

ಈ ಪೈಕಿ ಶ್ರೇಯಸ್ಸ ಮಲ್ಲೂರ 611 ಅಂಕ (97.76%) ಪಡೆದು ಗ್ರಾಮೀಣ ವಲಯಕ್ಕೆ ದ್ವಿತೀಯ ಸ್ಥಾನ, ವೈಷ್ಣವಿ ಲಮಾಣಿ 610 ಅಂಕ (97.60%) ಪಡೆದು ತೃತೀಯ ಸ್ಥಾನ ಗಳಿಸಿ ಕೀರ್ತಿ ತಂದಿದ್ದಾರೆ. ವಿದ್ಯಾರ್ಥಿಗಳ ಸತತ ಪರಿಶ್ರಮವೇ ಈ ಸಾಧನೆಗೆ ಕಾರಣವಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಶ್ರೇಯಸ್ಸ ಮಲ್ಲೂರ (611), ವೈಷ್ಣವಿ ಲಮಾಣಿ (610), ಬಿಂದು ಪಾಟೀಲ (609), ಹರ್ಷಿತಾ ಅಕ್ಕಮ್ಮನವರ (600) ಹಾಗೂ 594 ಅಂಕ ಪಡೆದ ವಿದ್ಯಾರ್ಥಿಗಳನ್ನು ಶಾಲೆ ವತಿಯಿಂದ ಸನ್ಮಾನಿಸಲಾಯಿತು.

ಶಾಲಾ ಆಡಳಿತಾಧಿಕಾರಿ ಬಿ.ಡಿ. ಹರ್ತಿ, ಮುಖ್ಯೋಪಾಧ್ಯಾಯ ಮಂಜಪ್ಪ ದೇಸಾಯಿ, ಅಂದೇನಪ್ಪ ವಡಗೇರಿ, ಬಿ.ಡಿ. ದಾಸರ, ಬಸವರಾಜ ಮಲ್ಲೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಬೆಳಗ್ಗೆಯಿಂದ ಧಾರ್ಮಿಕ ಕಾರ್ಯಗಳು – ವೀರಭದ್ರೇಶ್ವರ ಸನ್ನಿಧಿಯಲ್ಲಿ ಭಕ್ತರ ದಂಡು!**

## ಸಹಸ್ರಾರು ಭಕ್ತರ ಜಯಘೋಷ ನಡುವೆ ಸಂಭ್ರಮದಿಂದ ಜರುಗಿದ ರಥೋತ್ಸವ



■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಆದಿದೇವ ಎಂದು ಪ್ರಸಿದ್ಧಿ ಪಡೆದ ಶ್ರೀ ವೀರಭದ್ರೇಶ್ವರ ರಥೋತ್ಸವವು ಸಹಸ್ರಾರು ಭಕ್ತರ ಜಯಘೋಷಗಳ ನಡುವೆ ಸೋಮವಾರ ಸಂಜೆ 6 ಗಂಟೆಗೆ ಭಕ್ತಿಭಾವದಿಂದ ಹಾಗೂ ಸಂಭ್ರಮದಿಂದ ಜರುಗಿತು.

ಸೋಮವಾರ ಬೆಳಿಗ್ಗೆಯಿಂದಲೇ ದೇವಸ್ಥಾನದಲ್ಲಿ ಧಾರ್ಮಿಕ ಪದ್ಧತಿಯಂತೆ ವಿಶೇಷ ಪೂಜಾ ಕಾರ್ಯಗಳು ನೆರವೇರಿದವು. ಈ ವೇಳೆ ಸಾವಿರಾರು ಭಕ್ತರು ದೇವಸ್ಥಾನಕ್ಕೆ ಆಗಮಿಸಿ, ವೀರಭದ್ರೇಶ್ವರನಿಗೆ ಪೂಜೆ ಸಲ್ಲಿಸಿ ಕಾಯಿ–ಕರ್ಪೂರ ಅರ್ಪಿಸಿದರು. ಕಳೆದ ಎರಡು ದಿನಗಳಿಂದ ದೇವಸ್ಥಾನದಲ್ಲಿ ಅನ್ನಸಂತರ್ಪಣೆ ಕೂಡ ನಡೆಯುತ್ತಿದ್ದು, ಭಾರಿ ಸಂಖ್ಯೆಯಲ್ಲಿ ಭಕ್ತರು ಮಹಾದಾಸೋಹದಲ್ಲಿ ಭಾಗಿಯಾಗಿ ಪ್ರಸಾದ ಸ್ವೀಕರಿಸಿದರು.

ರಥೋತ್ಸವದ ನಿಮಿತ್ತ ದೇವಸ್ಥಾನ ಹಾಗೂ ಸುತ್ತಮುತ್ತಲಿನ ಮಾರುಕಟ್ಟೆ ಪ್ರದೇಶವನ್ನು ಆಕರ್ಷಕ ವಿದ್ಯುತ್ ದೀಪಗಳಿಂದ ಅಲಂಕೃತಗೊಳಿಸಲಾಗಿತ್ತು. ವಿವಿಧ ಬಣ್ಣಗಳ ಬೆಳಕು ಕಂಗೊಳಿಸುತ್ತಿದ್ದು, ದರ್ಶನಾರ್ಥಿಗಳ ಮನಸ್ಸನ್ನು ಮುದಗೊಳಿಸಿತು. ತೇರನ್ನು ಹೂಗಳಿಂದ ಅಲಂಕರಿಸಲಾಗಿದ್ದು, ಜಾತ್ರೆಯ ಸಂಭ್ರಮಕ್ಕೆ ಮತ್ತಷ್ಟು ಮೆರಗು ತಂದಿತು.

ಬೆಳಗಿನ ಜಾವ ಪೋತರಾಜನ ಕಟ್ಟೆ ಬಳಿಯ ದೇವಸ್ಥಾನದಿಂದ ವೀರಭದ್ರೇಶ್ವರ ದೇವಸ್ಥಾನದವರೆಗೆ ಮಡಿಹುಡಿಯಿಂದ ಗುಗ್ಗಳ ಮೆರವಣಿಗೆ ನಡೆಯಿತು. ಈ ಸಂದರ್ಭದಲ್ಲಿ ವೀರಗಾಸೆ ನೃತ್ಯ ಪ್ರದರ್ಶನದ ಮೂಲಕ ದೇವರ ಮಹಿಮೆಗಳನ್ನು ಸಾರಲಾಗಿದ್ದು, ಭಕ್ತರನ್ನು ಮೂಕವಿಸ್ಮಿತರನ್ನಾಗಿಸಿತು. ಮೆರವಣಿಗೆಯ ವೇಳೆ ವಾಹನ ಸಂಚಾರಕ್ಕೆ ತಾತ್ಕಾಲಿಕ ನಿರ್ಬಂಧ ವಿಧಿಸಿ ಪೊಲೀಸರು ಸೂಕ್ತ ವ್ಯವಸ್ಥೆ ಮಾಡಿದರು. ಸಂಜೆ ವೇಳೆಗೆ ನಂದಿಕೋಲು ಮೆರವಣಿಗೆ ಆರಂಭವಾಗುತ್ತಿದ್ದಂತೆ ದೇವಸ್ಥಾನದತ್ತ ಭಕ್ತರ ದಂಡು ಹರಿದುಬಂತು. ಈ ಸಂದರ್ಭದಲ್ಲಿ ತೇರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಬಳಿಕ ಭಕ್ತರು ಜಯಘೋಷಗಳೊಂದಿಗೆ ತೇರನ್ನು ಪೋತರಾಜನ ಕಟ್ಟೆಯವರೆಗೆ ಎಳೆದು ಮತ್ತೆ ದೇವಸ್ಥಾನಕ್ಕೆ ತಂದು ಸೇರಿಸಿದರು. ಅನೇಕರು ಹೂ, ಹಣ್ಣು, ಉತ್ತತ್ತಿಗಳನ್ನು ಅರ್ಪಿಸಿ ತಮ್ಮ ಇಷ್ಟಾರ್ಥಗಳಿಗಾಗಿ ಪ್ರಾರ್ಥಿಸಿದರು. ಒಟ್ಟಿನಲ್ಲಿ, ಕಳೆದ ಒಂದು ವಾರದಿಂದ ನಡೆಯುತ್ತಿದ್ದ ಜಾತ್ರೆ ಸಂಭ್ರಮಭರಿತವಾಗಿ ಸಂಪನ್ನಗೊಂಡಿತು.

**ಸೌಹಾರ್ದತೆ ಸಾರುವ ವೀರಭದ್ರೇಶ್ವರ ಜಾತ್ರೆ**

ಪಟ್ಟಣದ ಆದಿದೇವ ಶ್ರೀ ವೀರಭದ್ರೇಶ್ವರನಿಗೆ ಎಲ್ಲ ವರ್ಗದ ಜನರು ಭಕ್ತರಾಗಿದ್ದಾರೆ. ಜಾತಿ-ಧರ್ಮ ಬೇಧವಿಲ್ಲದೆ ಎಲ್ಲರೂ ಭಾಗವಹಿಸುವುದು ಈ ಜಾತ್ರೆಯ ವಿಶೇಷತೆ. ರಥೋತ್ಸವದ ಸಂದರ್ಭದಲ್ಲಿ ಸಮುದಾಯದ ಎಲ್ಲ ವರ್ಗದ ಜನರು ಒಂದಾಗಿ ಭಕ್ತಿಭಾವ ಪ್ರದರ್ಶಿಸುವುದು ಸೌಹಾರ್ದತೆ ಮತ್ತು ಸಹೋದರತೆಯ ಸಂಕೇತವಾಗಿದೆ.

ಈ ಜಾತ್ರೆ ರೋಣ ಪಟ್ಟಣದ ಜನತೆಗೆ ಹೆಮ್ಮೆಯ ಹಬ್ಬವಾಗಿ ರೂಪುಗೊಂಡಿದ್ದು, ಸಮಾಜದಲ್ಲಿ ಏಕತೆ ಮತ್ತು ಭಕ್ತಿಯ ಮೌಲ್ಯಗಳನ್ನು ಬಲಪಡಿಸುವ ಮಹತ್ವದ ಆಚರಣೆಯಾಗಿದೆ.

**ಸೌಲಭ್ಯಗಳು, ಶಿಸ್ತು ಮತ್ತು ಶೈಕ್ಷಣಿಕ ಗುಣಮಟ್ಟ ಪರಿಶೀಲನೆ**

## ಹುಲಕೋಟಿ ಕಾಲೇಜಿನ ಅಭಿವೃದ್ಧಿಗೆ ನಿರ್ದೇಶಕಿ ಮೆಚ್ಚುಗೆ



■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಕಾಲೇಜು ಶಿಕ್ಷಣ ಇಲಾಖೆಯ ನಿರ್ದೇಶಕಿ ಪ್ರೊ. ಶೋಭಾ ಜಿ. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗೆ ಭೇಟಿ ನೀಡಿ ಕಾಲೇಜಿನ ಶೈಕ್ಷಣಿಕ ಹಾಗೂ ಮೂಲಸೌಕರ್ಯ ವ್ಯವಸ್ಥೆಯನ್ನು ಪರಿಶೀಲಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾಲೇಜಿನ ವಿವಿಧ ವಿಭಾಗಗಳು, ಶೈಕ್ಷಣಿಕ ಚಟುವಟಿಕೆಗಳು ಹಾಗೂ ಸೌಲಭ್ಯಗಳನ್ನು ಅವಲೋಕಿಸಿದ ಅವರು, ಪ್ರಶಾಂತ ನೈಸರ್ಗಿಕ ವಾತಾವರಣದಲ್ಲಿ ನಿರ್ಮಾಣಗೊಂಡಿರುವ ಕಟ್ಟಡವು ವಿಶಿಷ್ಟ ಹಾಗೂ ಆಕರ್ಷಕವಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಶಿಸ್ತು, ತರಗತಿ ಕೊಠಡಿಗಳ ವ್ಯವಸ್ಥೆ, ಗ್ರಂಥಾಲಯ ಮತ್ತು ಪ್ರಯೋಗಾಲಯಗಳ ಸೌಲಭ್ಯ, ಶುದ್ಧ ಕುಡಿಯುವ ನೀರಿನ ಘಟಕ, ವಿಶಾಲ ಆಟದ ಮೈದಾನ, ಉದ್ಯಾನವನ ಸೇರಿದಂತೆ ವಿದ್ಯಾರ್ಥಿಗಳ ಓದು ಹಾಗೂ ಊಟಕ್ಕೆ ಅನುಕೂಲಕರವಾಗಿ ನಿರ್ಮಿಸಿರುವ ಅಂಗಳಗಳನ್ನು ಗಮನಿಸಿ ಕಾಲೇಜಿನ ಸಮಗ್ರ ಅಭಿವೃದ್ಧಿಗೆ ಶ್ಲಾಘನೆ ವ್ಯಕ್ತಪಡಿಸಿದರು.

ಕಾಲೇಜಿನ ಪ್ರಾಂಶುಪಾಲೆ ಪ್ರೊ. ಸುಧಾ ಕೌಜಗೇರಿ ಅವರು ನಿರ್ದೇಶಕಿಯನ್ನು ಸ್ವಾಗತಿಸಿ, ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳು, ಬೋಧಕ ವೃಂದದ ಸಾಧನೆಗಳು ಹಾಗೂ ಭವಿಷ್ಯದ ಯೋಜನೆಗಳ ಕುರಿತು ವಿವರಿಸಿದರು. ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಕಾಲೇಜು ಮಾದರಿ ಕಾಲೇಜಾಗಿ ರೂಪುಗೊಂಡಿದ್ದು, ಇದೇ ವರ್ಷದಿಂದ ಬಿಬಿಎ ಪದವಿ ಕೋರ್ಸ್ ಪ್ರಾರಂಭಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಾಧ್ಯಾಪಕರು ಹಾಗೂ ಬೋಧಕೇತರ ಸಿಬ್ಬಂದಿ ನಿರ್ದೇಶಕಿಯನ್ನು ಸನ್ಮಾನಿಸಿ, ಅವರ ಭೇಟಿ ಕಾಲೇಜಿನ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ನೀಡಲಿದೆ ಎಂದು ಸಂತಸ ವ್ಯಕ್ತಪಡಿಸಿದರು.

## ವಸೂಲು ಮಾಡಿದ ಸುಂಕವನ್ನು ಕಟ್ಟುನಿಟ್ಟಾಗಿ ಮಂಡಳಿಗೆ ರವಾನಿಸಬೇಕು

▶▶ ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಜಿಲ್ಲಾ ಬಾಲಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಸಂದೇಶ ಪಾಟೀಲ ಸೇರಿದಂತೆ ಸಮಿತಿಯ ಸದಸ್ಯರು ಹಾಜರಿದ್ದರು. ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಸ್ವಾಗತಿಸಿ ವಂದಿಸಿದರು.

# ಸಿದ್ಧಲಿಂಗನಗರ ಸರ್ಕಾರಿ ಪ್ರೌಢಶಾಲೆಗೆ ಐತಿಹಾಸಿಕ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸಿದ್ಧಲಿಂಗನಗರ ಸರ್ಕಾರಿ ಪ್ರೌಢಶಾಲೆ ತನ್ನ 33 ವರ್ಷಗಳ ಶೈಕ್ಷಣಿಕ ಇತಿಹಾಸದಲ್ಲೇ ಇದೇ ಮೊದಲ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ. 99.13 ರಷ್ಟು ದಾಖಲೆಯ ಫಲಿತಾಂಶ ಸಾಧಿಸಿದೆ.

ಈ ಸಾಧನೆ ಶಿಕ್ಷಕರ ವಿಶೇಷ ಪರಿಶ್ರಮ ಹಾಗೂ ವಿದ್ಯಾರ್ಥಿಗಳ ಕಲಿಕಾ ಆಸಕ್ತಿಯಿಂದ ಸಾಧ್ಯವಾಗಿದೆ ಎಂದು ಶಾಲಾ ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ ಹರ್ಷ ವ್ಯಕ್ತಪಡಿಸಿದರು. 114 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಕೇವಲ ಒಬ್ಬ ವಿದ್ಯಾರ್ಥಿನಿ ಕನ್ನಡ ವಿಷಯದಲ್ಲಿ ನಾಲ್ಕು ಅಂಕಗಳ ಕೊರತೆಯಿಂದ ಅನುತ್ತೀರ್ಣರಾಗಿರುವುದರಿಂದ ಶೇ.100 ಫಲಿತಾಂಶ ತಪ್ಪಿದೆ. ಮುಂದಿನ ದಿನಗಳಲ್ಲಿ ಶೇ.100 ಸಾಧನೆ ಖಚಿತವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.



ಮೂರು ವರ್ಷಗಳ ಹಿಂದೆ ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳು ಹಾಗೂ ಜನಪ್ರತಿನಿಧಿಗಳು, ದಾನಿಗಳ ಸಹಕಾರದಿಂದ ಶಾಲೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಗುಣಮಟ್ಟದ ಶಿಕ್ಷಣಕ್ಕೆ ಸೂಕ್ತ ವಾತಾವರಣ ನಿರ್ಮಾಣ ಮಾಡಲಾಗಿತ್ತು. ಇದರ ಪರಿಣಾಮವಾಗಿ ಶಿಕ್ಷಕರು ಸತತ ಪರಿಶ್ರಮದಿಂದ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದ್ದು, ಇದೀಗ ಶಾಲೆ ಜಿಲ್ಲಾಮಟ್ಟದಲ್ಲಿ ಪ್ರತಿಷ್ಠಿತ ಸ್ಥಾನವನ್ನು ಪಡೆದುಕೊಂಡಿದೆ. ಪಾಲಕರ ಅಸಹಕಾರ ಹಾಗೂ ಕೆಲ ವಿದ್ಯಾರ್ಥಿಗಳ ಅಶಿಸ್ತಿನ ನಡುವೆಯೂ ಶಿಕ್ಷಕರು ವಿದ್ಯಾರ್ಥಿ–ಪಾಲಕರೊಂದಿಗೆ ನಿತ್ಯ ಸಂಪರ್ಕದಲ್ಲಿದ್ದು, ರಾತ್ರಿ 9 ಗಂಟೆಯವರೆಗೆ ಮಾರ್ಗದರ್ಶನ ನೀಡುತ್ತಾ ವಿದ್ಯಾರ್ಥಿಗಳ ಕಲಿಕೆಗೆ ಉತ್ತೇಜನ ನೀಡಿದದ್ದು ಈ ಸಾಧನೆಗೆ ಕಾರಣವಾಗಿದೆ. ಸರ್ಕಾರಿ ಶಾಲೆಗಳ ಬಗ್ಗೆ ಮೂಗು ಮುರಿಯುವ ಕಾಲದಲ್ಲಿ ಈ ಶಾಲೆ ವಿದ್ಯಾರ್ಥಿ–ಪಾಲಕರ ಮೆಚ್ಚಿನ ಶಿಕ್ಷಣ ಸಂಸ್ಥೆಯಾಗಿ ಹೊರಹೊಮ್ಮಿದ್ದು, ಕಳೆದ ವರ್ಷ 480ಕ್ಕೂ ಹೆಚ್ಚು ವಿದ್ಯಾರ್ಥಿಗಳು ಇಲ್ಲಿ ಶಿಕ್ಷಣ ಪಡೆದಿರುವುದು ಗಮನಾರ್ಹವಾಗಿದೆ. ಶಾಲೆಯಲ್ಲಿ ಕೇವಲ ಸೌಕರ್ಯಗಳಷ್ಟೇ ಅಲ್ಲದೆ ಗುಣಮಟ್ಟದ ಶಿಕ್ಷಣಕ್ಕೂ ಸಮಾನ ಪ್ರಾಮುಖ್ಯತೆ ನೀಡಲಾಗಿದೆ.

ಶಿಕ್ಷಣ ಇಲಾಖೆಯ ಮಾರ್ಗದರ್ಶನ, ಶಿಕ್ಷಕರ ಪರಿಶ್ರಮ, ವಿದ್ಯಾರ್ಥಿಗಳ ಆಸಕ್ತಿ ಹಾಗೂ ಪಾಲಕರ ಸಹಕಾರದಿಂದ ಈ ದಾಖಲೆ ಫಲಿತಾಂಶ ಸಾಧ್ಯವಾಗಿದೆ. ಶಾಲೆಯ ಸಾಧನೆಗೆ ಸಭಾಪತಿ ಬಸವರಾಜ ಹೊರಟ್ಟಿ ಅಭಿನಂದನೆ ಸಲ್ಲಿಸಿದ್ದು, ಶಿಕ್ಷಕರ ಶ್ರಮ ಸಾರ್ಥಕವಾಗಿದೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಸಾಧಕ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಉಪನಿರ್ದೇಶಕ ಆರ್. ಎಸ್. ಬುರುಡಿ, ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟೆಪ್ಪನವರ್, ನೋಡಲ್ ಅಧಿಕಾರಿ ಶಂಕರ್ ಹಡಗಲಿ, ಎಸ್.ಡಿ.ಎಂ.ಸಿ ಅಧ್ಯಕ್ಷೆ ಸುನಂದ ಕಟವಟಿ, ಮುಖ್ಯೋಪಾಧ್ಯಾಯ ಹೆಚ್. ವೈ. ತಕ್ಕಲಕೋಟಿ, ಮಾಜಿ ಮುಖ್ಯೋಪಾಧ್ಯಾಯೆ ಜಯಲಕ್ಷ್ಮಿ ಅಣ್ಣಿಗೇರಿ ಸೇರಿದಂತೆ ಅನೇಕರು ಅಭಿನಂದಿಸಿದರು.

ಕರ್ನಾಟಕ ಸರಕಾರ
**ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ-582101**
ಜಿಲ್ಲಾ : ಗದಗ ರಾಜ್ಯ : ಕರ್ನಾಟಕ
ದೂ: 08372-259932 ಇ-ಮೇಲ್: ka.gadag.betageri.cmc@gmail.com
ನಂ.ಗಬೆನಸ/ತಾಂ.ವಿ/ವಹಿ/ಟೆಂಡರ್/2026-27 ದಿನಾಂಕ: 27-04-2026

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999-2000ರ ಪ್ರಕಾರ ಸ್ಟ್ಯಾಂಡರ್ಡ ಟೆಂಡರ್ ಡಾಕ್ಯೂಮೆಂಟ್ಸ್ ನಿಯಮದನ್ವಯ ಸನ್ 2026-27ನೇ ಸಾಲಿನ ನಗರಸಭೆ ಅನುದಾನದಲ್ಲಿ ಕಾಮಗಾರಿ ನಿರ್ವಹಿಸಬೇಕಾಗಿದ್ದು, ಅಂದಾಜು ಪತ್ರಿಕೆ ಮೊತ್ತ **ರೂ. 17.81 ಲಕ್ಷ**ಗಳಿಗೆ ಒಟ್ಟು 04 ಕಾಮಗಾರಿಗಳಿಗೆ ಟೆಂಡರ್ ದರಗಳನ್ನು ಆಹ್ವಾನಿಸಿದ್ದು, ಖಾಲಿ ಟೆಂಡರ್ ಫಾರಂ ಫೀ 1000.00+18% ಜಿ.ಎಸ್.ಟಿ. ನಗರಸಭೆಗೆ ಪಾವತಿಸಿ ಖಾಲಿ ಟೆಂಡರ್ ಪಾರಂ ಪಡೆಯುವುದು. ಕಾಮಗಾರಿಯ ಹೆಚ್ಚಿನ ಮಾಹಿತಿ ಬೇಕಾದಲ್ಲಿ ತಾಂತ್ರಿಕ ಶಾಖೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆದು. ಟೆಂಡರ್ ಸಲ್ಲಿಸಬಹುದಾಗಿದೆ.

1) ಖಾಲಿ ಟೆಂಡರ್ ನಮೂನೆಗಾಗಿ ಅರ್ಜಿಯನ್ನು **ದಿನಾಂಕ: 27-04-2026**ರಿಂದ **ದಿನಾಂಕ:-14-05-2026** ರವರೆಗೆ
2) ಅರ್ಜಿ ಫಾರ್ಮ ಪಡೆದು ಟೆಂಡರ್ ಭರ್ತಿ ಮಾಡಿ ಹಾಕುವ **ದಿನಾಂಕ: 15-05-2026 ಸಂಜೆ 4-00 ಗಂಟೆ** ಒಳಗಾಗಿ
3) ಟೆಂಡರ್ ತೆರೆಯುವ **ದಿನಾಂಕ: 16-05-2026 ಸಂಜೆ 4-30ಗಂಟೆಗೆ**
4) ಹೆಚ್ಚಿನ ಮಾಹಿತಿ ಬೇಕಾದಲ್ಲಿ ಪಿ.ಡಬ್ಲ್ಯೂ.ಡಿ. ವಿಭಾಗದಲ್ಲಿ ಕೇಳಿ ಪಡೆಯಬಹುದು.

ಸಹಿ/- ಪೌರಾಯುಕ್ತರು
ಗದಗ-ಬೆಟಗೇರಿ ನಗರಸಭೆ
ವಾ.ಸಾ.ಸಂ.ಇ/ಗದಗ/41/ದೇಶಪಾಂಡೆಪಬ್ಲಿಸಿಟಿ/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka